ಸಂಪುಟ: 11 ಸಂಚಿಕೆ: 193 ಪುಟ: 4+2 ಬೆಲೆ : 3.00 ಶನಿವಾರ, ಸೆಪ್ಟೆಂಬರ್ 05, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 193 Pages : 4+2 Rate : 3.00 Saturday, September 05, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.



**ಗದಗ:** ತಾಲೂಕಿನ ಮಲ್ಲಸಮುದ್ರ ಗ್ರಾಮದ ಅಟಲ್ ಚಾಂಪ್ಸ್ ಶಾಲೆಯಲ್ಲಿ ಕೃಷ್ಣ ಜನ್ಮಾಷ್ಟಮಿ ನಿಮಿತ್ತ ವಿಶೇಷ ನೃತ್ಯ ಕಾರ್ಯಕ್ರಮ ನಡೆಯಿತು.

ಕೃಷ್ಣನ ವೇಷದಲ್ಲಿ ಅಮರ್ತ್ಯ ಹುಣಸಿಮರದ ಹಾಗೂ ರಾಧೆಯ ವೇಷದಲ್ಲಿ ಶ್ರೇಯಾ ಕಡ್ಲಿಮಟ್ಟಿ ಆಕರ್ಷಕವಾಗಿ ಕುಣಿದು ಎಲ್ಲರ ಗಮನ ಸೆಳೆದರು. ಪುಟಾಣಿಗಳ ಸಂಭ್ರಮದ ನೃತ್ಯ ಕಾರ್ಯಕ್ರಮಕ್ಕೆ ಪಾಲಕರು ಹಾಗೂ ಶಿಕ್ಷಕರು ಮೆಚ್ಚುಗೆ ವ್ಯಕ್ತಪಡಿಸಿದರು. ಕೃಷ್ಣ-ರಾಧೆಯ ವೇಷಭೂಷಣದಲ್ಲಿ ಮಕ್ಕಳು ಸಂಭ್ರಮಿಸಿದ್ದು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.

### ಶ್ರೀಕೃಷ್ಣ ಸಂದೇಶ, ಬಸವಣ್ಣನವರ ಆದರ್ಶ ಅಳವಡಿಕೆಗೆ ಶಾಸಕ ಎಸ್.ವಿ. ಸಂಕನೂರ ಕರೆ

# ಗೀತೆ–ಕಾಯಕ ತತ್ವವೇ ಬಲಿಷ್ಠ ರಾಷ್ಟ್ರದ ಅಡಿಗಲ್ಲು

**ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀಕೃಷ್ಣ ಪರಮಾತ್ಮನ ಭಗವದ್ಗೀತೆಯ ಸಂದೇಶಗಳು ಹಾಗೂ ಜಗಜ್ಯೋತಿ ಬಸವೇಶ್ವರರ 'ಕಾಯಕವೇ ಕೈಲಾಸ' ತತ್ವವನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಮೃದ್ಧ, ಸದೃಢ ಹಾಗೂ ಬಲಿಷ್ಠ ರಾಷ್ಟ್ರ ನಿರ್ಮಾಣ ಸಾಧ್ಯ ಎಂದು ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರ ಹೇಳಿದರು.



ನಗರದ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಭಗವಾನ್ ಶ್ರೀಕೃಷ್ಣ ಜಯಂತಿ 2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಗವದ್ಗೀತೆಯಲ್ಲಿ ಶ್ರೀಕೃಷ್ಣನು 'ಕರ್ಮಣ್ಯೇವಾಧಿಕಾರಸ್ತೇ ಮಾ ಫಲೇಷು ಕದಾಚನ' ಎಂಬ ಸಂದೇಶದ ಮೂಲಕ ಕರ್ತವ್ಯಕ್ಕೆ ಅತ್ಯುನ್ನತ ಸ್ಥಾನ ನೀಡಿದ್ದಾನೆ. ಪ್ರತಿಫಲದ ನಿರೀಕ್ಷೆಯಿಲ್ಲದೆ ಪ್ರತಿಯೊಬ್ಬರೂ ತಮ್ಮ ಕರ್ತವ್ಯವನ್ನು ಶ್ರದ್ಧೆ ಹಾಗೂ ಪ್ರಾಮಾಣಿಕತೆಯಿಂದ ನಿರ್ವಹಿಸಬೇಕು. ಬದುಕಿನಲ್ಲಿ ಎಷ್ಟೇ ಸಂಕಷ್ಟಗಳು ಎದುರಾದರೂ ಧೈರ್ಯ ಕಳೆದುಕೊಳ್ಳದೆ ಸತ್ಯ ಮತ್ತು ಅಹಿಂಸೆಯ ಮಾರ್ಗದಲ್ಲಿ ಮುನ್ನಡೆಯಬೇಕು ಎಂದರು.

ಬಸವಣ್ಣನವರ 'ಕಾಯಕವೇ ಕೈಲಾಸ' ತತ್ವವೂ ಪ್ರಾಮಾಣಿಕ ಕಾಯಕದ ಮಹತ್ವವನ್ನು ಸಾರುತ್ತದೆ. ಈ ಇಬ್ಬರು ಮಹನೀಯರ ಜೀವನ ಸಂದೇಶಗಳನ್ನು ಅಳವಡಿಸಿಕೊಂಡು ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಶ್ರೀಕೃಷ್ಣನ ಆರಾಧಕರು ಬದುಕಿನಲ್ಲಿ ಕೆಲವು ಪ್ರಮುಖ ನಿಯಮಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದ ಸಂಕನೂರ, ಜೀವಿಗಳ ಮೇಲೆ ಕರುಣೆ ಹಾಗೂ ದಯೆ ಹೊಂದಬೇಕು, ಮದ್ಯಪಾನ ಸೇರಿದಂತೆ ದುಶ್ಚಟಗಳಿಂದ ದೂರವಿರಬೇಕು, ನೈತಿಕ ಮೌಲ್ಯಗಳನ್ನು ಪಾಲಿಸಬೇಕು ಹಾಗೂ ಜೂಜಾಟ ಮತ್ತು ಬೆಟ್ಟಿಂಗ್‌ನಂತಹ ಚಟಗಳಿಗೆ ಬಲಿಯಾಗಬಾರದು ಎಂದರು.

ದುರಾಸೆಗೆ ಒಳಗಾಗದೆ ಸತ್ಯದ ಹಾದಿಯಲ್ಲಿ ಸಾಗಿದರೆ ಮನಸ್ಸಿನ ಶಾಂತಿ ಮತ್ತು ಉತ್ತಮ ಬದುಕು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಶಿಕ್ಷಣವೇ ಪ್ರಮುಖ ಅಸ್ತ್ರವಾಗಿದೆ. ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಹಿಂದುಳಿದ ಸಮಾಜಗಳು ಮುಂಚೂಣಿಗೆ ಬರಬೇಕಾದರೆ ಜ್ಞಾನ ಸಂಪಾದನೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಜ್ಞಾನವೇ ಅತ್ಯಂತ ದೊಡ್ಡ ಶಕ್ತಿಯಾಗಿದ್ದು, ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು ಎಂದು ಹೇಳಿದರು.

ಧರ್ಮದ ಹಾದಿಯಲ್ಲಿ ಸತ್ಯ, ಪ್ರಾಮಾಣಿಕತೆ ಹಾಗೂ ಕಾಯಕದೊಂದಿಗೆ ಮುನ್ನಡೆದರೆ ಯಶಸ್ಸು ಖಚಿತ ಎಂದು ಸಂಕನೂರ ಪ್ರತಿಪಾದಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಶ್ರೀಕೃಷ್ಣನು ತನ್ನ ಜೀವನದಲ್ಲಿ ಯಾವುದೇ ಕಾರ್ಯವನ್ನು ಸ್ವಾರ್ಥಕ್ಕಾಗಿ ಮಾಡಲಿಲ್ಲ. ಆತನ ಪ್ರತಿಯೊಂದು ಹೆಜ್ಜೆಯೂ ಸಮಾಜದ ಹಿತ ಮತ್ತು ಧರ್ಮ ಸಂಸ್ಥಾಪನೆಗಾಗಿ ಇತ್ತು ಎಂದು ಹೇಳಿದರು.

ಮಹಾಭಾರತದ ವಿವಿಧ ಪ್ರಸಂಗಗಳಲ್ಲಿ ಶ್ರೀಕೃಷ್ಣ ತೆಗೆದುಕೊಂಡ ನಿರ್ಧಾರಗಳು ಧರ್ಮದ ಗೆಲುವಿಗಾಗಿ ರೂಪಿಸಿದ ವಿಶಾಲ ಯೋಜನೆಯ ಭಾಗವಾಗಿದ್ದವು. ಪ್ರತಿಯೊಬ್ಬರೂ ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸಬೇಕು. ತಮಗೆ ತಪ್ಪು ಎಂದು ಅನಿಸುವ ಕೆಲಸವನ್ನು ಮಾಡದಿರುವುದೇ ನಿಜವಾದ ಕರ್ತವ್ಯ ಎಂದು ತಿಳಿಸಿದರು.

ಯಾವುದೇ ಕೆಲಸ ಕೈಗೊಳ್ಳುವ ಮುನ್ನ ಅದರ ಸಾಧಕ ಬಾಧಕಗಳನ್ನು ಸರಿಯಾಗಿ ವಿಶ್ಲೇಷಿಸಿ ಮುನ್ನಡೆದರೆ ತಪ್ಪುಗಳನ್ನು ಕಡಿಮೆ ಮಾಡಬಹುದು. ಸದಾ ಧನಾತ್ಮಕ ಮನೋಭಾವನೆಯೊಂದಿಗೆ ಸಮಾಜದ ಒಳಿತಿಗಾಗಿ ಶ್ರಮಿಸುವ ಸಂಕಲ್ಪವನ್ನು ಪ್ರತಿಯೊಬ್ಬರೂ ಮಾಡಬೇಕು ಎಂದು ಕರೆ ನೀಡಿದರು.

ಜಿಲ್ಲಾ ಘಟಕ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಅಧ್ಯಕ್ಷ ಎಂ.ಕೆ. ಲಮಾಣಿ ಅವರು ಶ್ರೀಕೃಷ್ಣನ ಜನನ ಹಾಗೂ ಬಾಲಲೀಲೆಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ದೇವಕಿ ಮತ್ತು ವಸುದೇವರ ಅಷ್ಟಮ ಗರ್ಭದಲ್ಲಿ ಶ್ರೀಕೃಷ್ಣ ಜನಿಸಿದ ಪ್ರಸಂಗದಿಂದ ಹಿಡಿದು, ಕಂಸನ ಅಹಂಕಾರವನ್ನು ಮುರಿಯಲು ಭಗವಂತ ಅವತರಿಸಿದ ಕಥೆಯನ್ನು ವಿವರಿಸಿದರು. ಕತ್ತಲ ರಾತ್ರಿಯಲ್ಲಿ ಮಳೆ ಬಿರುಗಾಳಿಯ ನಡುವೆಯೂ ವಸುದೇವರು ಮಗುವನ್ನು ಬುಟ್ಟಿಯಲ್ಲಿಟ್ಟು ಯಮುನಾ ನದಿಯನ್ನು ದಾಟಿದಾಗ ನಡೆದ ದೈವಿಕ ಘಟನೆಗಳನ್ನು ಸ್ಮರಿಸಿದರು.

ಗೋಕುಲದಲ್ಲಿ ಯಶೋದೆಯ ಮಡಿಲಲ್ಲಿ ಬೆಳೆದ ಬಾಲಕೃಷ್ಣನ ತುಂಟಾಟಗಳು ಹಾಗೂ ಆತನ ಬಾಲಲೀಲೆಗಳನ್ನು ವಿವರಿಸಿದ ಅವರು, ಇಂದ್ರನ ಅತಿವೃಷ್ಟಿಯಿಂದ ಗೋಕುಲದ ಜನರನ್ನು ರಕ್ಷಿಸಲು ಶ್ರೀಕೃಷ್ಣ ತನ್ನ ಕಿರುಬೆರಳಿನಲ್ಲಿ ಗೋವರ್ಧನ ಗಿರಿಯನ್ನು ಎತ್ತಿಹಿಡಿದ ಪ್ರಸಂಗವು ಪ್ರಕೃತಿ ಹಾಗೂ ಜೀವಜಾಲದ ಸಂರಕ್ಷಣೆಯ ಮಹತ್ವವನ್ನು ಸಾರುತ್ತದೆ ಎಂದರು.

ಇಂದಿನ ಯುವಜನತೆ ಶ್ರೀಕೃಷ್ಣನ ಜೀವನ ಮತ್ತು ಭಗವದ್ಗೀತೆಯ ಸಂದೇಶಗಳನ್ನು ಅರ್ಥಮಾಡಿಕೊಂಡು ದುಶ್ಚಟಗಳಿಂದ ದೂರವಿರಬೇಕು. ಸಮಯವನ್ನು ಸದುಪಯೋಗಪಡಿಸಿಕೊಂಡು ಶಿಕ್ಷಣ, ಜ್ಞಾನ, ಕೌಶಲ್ಯ ಹಾಗೂ ಉತ್ತಮ ಚಿಂತನೆಗಳ ಮೂಲಕ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಎಂ.ಕೆ. ಲಮಾಣಿ ಸಲಹೆ ನೀಡಿದರು.

ಯುವಜನತೆ ಉತ್ತಮ ದಾರಿಯಲ್ಲಿ ಸಾಗಿದಾಗ ಮಾತ್ರ ಸದೃಢ ಕುಟುಂಬ, ಆರೋಗ್ಯಕರ ಸಮಾಜ ಹಾಗೂ ಬಲಿಷ್ಠ ರಾಷ್ಟ್ರ ನಿರ್ಮಾಣ ಸಾಧ್ಯ ಎಂದು ಹೇಳಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷ ಸಿದ್ದು ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ವಿ. ಬಳ್ಳಾರಿ ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಬಾಹುಬಲಿ ಜೈನ್ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

### ಗ್ರಾಮೀಣ ಉತ್ಪನ್ನಗಳಿಗೆ ಮಾರುಕಟ್ಟೆ ಕಲ್ಪಿಸುವ ಮಹತ್ವದ ಹೆಜ್ಜೆ: ಗವಿಸಿದ್ದೇಶ್ವರ ಶ್ರೀಗಳು

# ಮಹಿಳಾ ಸ್ವಾವಲಂಬನೆಗೆ ಮಾಸಿಕ ಸಂತೆ ಆಸರೆ

**ವಿಜಯಸಾಕ್ಷಿ ಸುದ್ದಿ, ರೋಣ**

ಗ್ರಾಮೀಣ ಭಾಗದ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಅಭಿವೃದ್ಧಿ ಹೊಂದಲು ಮಹಿಳಾ ಸ್ವಸಹಾಯ ಸಂಘಗಳ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಕಲ್ಪಿಸುವುದು ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಮಾಸಿಕ ಸಂತೆ ಕಾರ್ಯಕ್ರಮ ಮಹತ್ವದ ಪಾತ್ರ ವಹಿಸಲಿದೆ ಎಂದು ಕೊಪ್ಪಳ ಗವಿಮಠದ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಹೇಳಿದರು.



ರೋಣ ತಾಲೂಕಿನ ಸವಡಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯೆಯರು ತಯಾರಿಸಿದ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟಕ್ಕಾಗಿ ಆಯೋಜಿಸಿದ್ದ 'ಮಾಸಿಕ ಸಂತೆ'ಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆ (ಎನ್‌ಆರ್‌ಎಲ್‌ಎಂ) ಸಂಜೀವಿನಿ ಯೋಜನೆಯಡಿ ಆರ್ಥಿಕ ನೆರವು ಹಾಗೂ ವಿವಿಧ ಸೌಲಭ್ಯಗಳನ್ನು ಪಡೆದಿರುವ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯೆಯರು ಮನೆಗಳಲ್ಲಿಯೇ ವಿವಿಧ ಉತ್ಪನ್ನಗಳನ್ನು ತಯಾರಿಸುತ್ತಿದ್ದಾರೆ. ಈ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ದೊರಕಿಸಿ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ಉದ್ದೇಶದಿಂದ ಮಾಸಿಕ ಸಂತೆಯಂತಹ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗಿದೆ ಎಂದು ಹೇಳಿದರು.

ಮಹಿಳೆಯರು ತಯಾರಿಸುವ ಗುಣಮಟ್ಟದ ಉತ್ಪನ್ನಗಳಿಗೆ ಸ್ಥಳೀಯ ಮಟ್ಟದಲ್ಲಿಯೇ ಉತ್ತಮ ಮಾರುಕಟ್ಟೆ ದೊರಕಿಸುವುದು ಅಗತ್ಯವಾಗಿದೆ. ಇಂತಹ ಸಂತೆಯ ಮೂಲಕ ಉತ್ಪಾದಕರು ಮತ್ತು ಗ್ರಾಹಕರ ನಡುವೆ ನೇರ ಸಂಪರ್ಕ ಸಾಧ್ಯವಾಗಲಿದ್ದು, ಮಹಿಳೆಯರು ತಮ್ಮ ಉತ್ಪನ್ನಗಳನ್ನು ಮಧ್ಯವರ್ತಿಗಳ ಅವಲಂಬನೆಯಿಲ್ಲದೆ ನೇರವಾಗಿ ಮಾರಾಟ ಮಾಡಲು ಅವಕಾಶ ದೊರೆಯಲಿದೆ ಎಂದರು.

ಗ್ರಾಮೀಣ ಮಹಿಳೆಯರ ಉತ್ಪನ್ನಗಳಿಗೆ ಉತ್ತಮ ಬೇಡಿಕೆ ಸೃಷ್ಟಿಸಿ ಅವರ ಆದಾಯ ಹೆಚ್ಚಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಮಹಿಳಾ ಸ್ವಸಹಾಯ ಸಂಘಗಳ ಆರ್ಥಿಕ ಚಟುವಟಿಕೆಗಳಿಗೆ ಇಂತಹ ಕಾರ್ಯಕ್ರಮಗಳು ಮತ್ತಷ್ಟು ಉತ್ತೇಜನ ನೀಡಲಿವೆ ಎಂದು ತಿಳಿಸಿದರು.

ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆರು ಮಹಿಳಾ ಸ್ವಸಹಾಯ ಸಂಘಗಳ ಸದಸ್ಯೆಯರು ಮಾಸಿಕ ಸಂತೆಯಲ್ಲಿ ಭಾಗವಹಿಸಿ, ತಾವು ತಯಾರಿಸಿದ ವಿವಿಧ ಉತ್ಪನ್ನಗಳನ್ನು ಪ್ರದರ್ಶನ ಹಾಗೂ ಮಾರಾಟಕ್ಕೆ ಇಟ್ಟಿದ್ದರು. ಆಹಾರ ಉತ್ಪನ್ನಗಳು, ಸಾಂಪ್ರದಾಯಿಕ ಖಾದ್ಯಗಳು, ಕರಕುಶಲ ವಸ್ತುಗಳು ಸೇರಿದಂತೆ ಹಲವು ಉತ್ಪನ್ನಗಳು ಗ್ರಾಹಕರ ಗಮನ ಸೆಳೆದವು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಿವನಗೌಡ ಮೆಣಸಗಿ, ಒಕ್ಕೂಟದ ಪದಾಧಿಕಾರಿಗಳು, ಗ್ರಾಮದ ಗಣ್ಯರು, ತಾಲೂಕಿನ ವಿವಿಧ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯೆಯರು, ಸಂಜೀವಿನಿ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕಾನ್‌ಸ್ಟೇಬಲ್ ಪರೀಕ್ಷೆ: ಪ್ರತಿಬಂಧಕಾಜ್ಞೆ ಜಾರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಸೆಪ್ಟೆಂಬರ್ 6ರಂದು ನಡೆಯಲಿರುವ ಪೊಲೀಸ್ ಕಾನ್ ಸ್ಟೇಬಲ್ (ಸಿಎಆರ್/ಡಿಎಆರ್) ನೇಮಕಾತಿ ಪರೀಕ್ಷೆಯನ್ನು ಸುಗಮ ಹಾಗೂ ಪಾರದರ್ಶಕವಾಗಿ ನಡೆಸುವ ಉದ್ದೇಶದಿಂದ ನಗರದ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.



ಪರೀಕ್ಷೆಯಲ್ಲಿ ನಕಲು, ನಕಲಿ ಅಭ್ಯರ್ಥಿಗಳ ಹಾಜರಾತಿ ಸೇರಿದಂತೆ ಯಾವುದೇ ಅಕ್ರಮ ಚಟುವಟಿಕೆಗಳಿಗೆ ಅವಕಾಶವಾಗದಂತೆ ಹಾಗೂ ಶಾಂತಿ–ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163ರಡಿ ಪ್ರತಿಬಂಧಕಾಜ್ಞೆ ವಿಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ನಗರದ ಹೆಚ್.ಸಿ.ಇ.ಎಸ್. ಪದವಿಪೂರ್ವ ಕಾಲೇಜು, ಜಿಲ್ಲಾ ಕ್ರೀಡಾಂಗಣದ ಹತ್ತಿರ; ಮನೋರಮಾ ಪದವಿಪೂರ್ವ ಕಾಲೇಜು; ಕೆ.ಎಲ್.ಇ. ಸೊಸೈಟಿಯ ಜಗದ್ಗುರು ತೋಂಟದಾರ್ಯ ಪದವಿಪೂರ್ವ ಕಾಲೇಜು; ಸನ್ಮಾರ್ಗ ಪದವಿಪೂರ್ವ ಕಾಲೇಜು, ಮುಂಡರಗಿ ರಸ್ತೆ; ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜು, ಮುಂಡರಗಿ ರಸ್ತೆ; ತೋಂಟದ ಸಿದ್ದೇಶ್ವರ ಪದವಿಪೂರ್ವ ಕಾಲೇಜು, ಭೂಮರಡ್ಡಿ ವೃತ್ತ; ಸರ್ಕಾರಿ ಪದವಿಪೂರ್ವ ಕಾಲೇಜು, ಮುಳಗುಂದ ರಸ್ತೆ ಹಾಗೂ ಕರ್ನಾಟಕ ಪದವಿಪೂರ್ವ ಕಾಲೇಜು, ಮಲ್ಲಸಮುದ್ರ ಅಂಜುಮನ್ ಕಾಲೇಜು ಕ್ಯಾಂಪಸ್‌ನಲ್ಲಿ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಸೆಪ್ಟೆಂಬರ್ 6ರಂದು ಬೆಳಿಗ್ಗೆ 10.30ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಪರೀಕ್ಷೆ ನಡೆಯಲಿದೆ.

ಪರೀಕ್ಷಾ ಕೇಂದ್ರಗಳ 200 ಮೀಟರ್ ವ್ಯಾಪ್ತಿಯಲ್ಲಿ ಐದು ಅಥವಾ ಅದಕ್ಕಿಂತ ಹೆಚ್ಚು ಜನರು ಅನಗತ್ಯವಾಗಿ ಗುಂಪುಗೂಡುವುದನ್ನು ನಿಷೇಧಿಸಲಾಗಿದೆ. ಈ ವ್ಯಾಪ್ತಿಯಲ್ಲಿರುವ ಜೆರಾಕ್ಸ್ ಅಂಗಡಿಗಳು, ಬುಕ್‌ಸ್ಟಾಲ್‌ಗಳು ಹಾಗೂ ಫೋಟೋಕಾಪಿ ಕೇಂದ್ರಗಳನ್ನು ಪರೀಕ್ಷಾ ಅವಧಿಯಲ್ಲಿ ಕಡ್ಡಾಯವಾಗಿ ಮುಚ್ಚುವಂತೆ ಸೂಚಿಸಲಾಗಿದೆ.

ಅಭ್ಯರ್ಥಿಗಳು ಹಾಗೂ ಅನಧಿಕೃತ ವ್ಯಕ್ತಿಗಳು ಮೊಬೈಲ್ ಫೋನ್, ಸ್ಮಾರ್ಟ್ ವಾಚ್, ಬ್ಲೂಟೂತ್ ಸಾಧನ, ಕ್ಯಾಮೆರಾ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳನ್ನು ಪರೀಕ್ಷಾ ಕೇಂದ್ರಕ್ಕೆ ತರದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಡ್ರೋನ್ ಅಥವಾ ಯಾವುದೇ ವೈಮಾನಿಕ ಚಿತ್ರೀಕರಣ ಸಾಧನಗಳ ಹಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಅಲ್ಲದೆ, ಲೌಡ್‌ಸ್ಪೀಕರ್ ಬಳಕೆ, ಪ್ರತಿಭಟನೆ, ಮೆರವಣಿಗೆ, ಘೋಷಣೆ ಕೂಗುವುದು ಹಾಗೂ ಸಾರ್ವಜನಿಕ ಸಭೆ ನಡೆಸುವುದಕ್ಕೂ ನಿರ್ಬಂಧ ವಿಧಿಸಲಾಗಿದೆ.

ಪರೀಕ್ಷೆಯ ಗೌಪ್ಯತೆ ಹಾಗೂ ಶಾಂತಿ–ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಜಾರಿಗೊಳಿಸಿರುವ ಈ ಪ್ರತಿಬಂಧಕಾಜ್ಞೆಯು ಸೆಪ್ಟೆಂಬರ್ 6ರಂದು ಬೆಳಿಗ್ಗೆ 6 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಜಾರಿಯಲ್ಲಿರಲಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ, ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಹಾಗೂ ನಿವೃತ್ತ ಶಿಕ್ಷಕರ ಸನ್ಮಾನ ಸಮಾರಂಭವನ್ನು ಸೆಪ್ಟೆಂಬರ್ 5ರಂದು ಮಧ್ಯಾಹ್ನ 12.30ಕ್ಕೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಉನ್ನತ ಶಿಕ್ಷಣ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಕಾರ್ಯಕ್ರಮ ಉದ್ಘಾಟಿಸುವರು. ಗದಗ ಶಾಸಕ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು.

ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್, ವಿಧಾನಸಭೆ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಘನ ಉಪಸ್ಥಿತಿ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಬಸವರಾಜ ಹೊರಟ್ಟಿ, ಎಸ್.ವಿ. ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್ ಭಾಗವಹಿಸುವರು.

ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಅಶೋಕ ಮಂದಾಲಿ ಅವರುಗಳು ಉಪಸ್ಥಿತರಿರುವರು.

ವಿಶೇಷ ಆಹ್ವಾನಿತರಾಗಿ

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ವಿ. ರಶ್ಮಿ ಮಹೇಶ್, ಸರ್ಕಾರದ ಸಂಘಗಳ ನಿಬಂಧಕರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ್, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ., ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್. ಆಗಮಿಸುವರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಡಯಟ್ ಅಭಿವೃದ್ಧಿ ಉಪನಿರ್ದೇಶಕ ಕೆ.ಡಿ. ಬಡಿಗೇರ, ತಾಲೂಕು ಶಾಲಾ ಶಿಕ್ಷಣ ಅಭಿವೃದ್ಧಿ ಸಮಿತಿ ಅಧ್ಯಕ್ಷರು ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ಹೀರಲಾಲ ಜನಗಿ, ಪದವಿಪೂರ್ವ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಾಸನಾಯಕ, ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ತಾಲೂಕು ಶಾಲಾ ಶಿಕ್ಷಣ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರು ಹಾಗೂ ಗದಗ ತಹಶೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಗದಗ ನಗರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ ಹಾಗೂ ಎಪಿಸಿಓ ಮತ್ತು ನೋಡಲ್ ಅಧಿಕಾರಿ ಶಿವಕುಮಾರ ಕುರಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ರಾಜ್ಯಮಟ್ಟದ ಶ್ರೇಷ್ಠ ಶಿಕ್ಷಕ ಪ್ರಶಸ್ತಿಗೆ ಎಂ.ಎಸ್. ಹಿರೇಮಠ ಆಯ್ಕೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಶಿಕ್ಷಕರ ಘಟಕ ವತಿಯಿಂದ ಶಿಕ್ಷಕರ ದಿನಾಚರಣೆ ಅಂಗವಾಗಿ ನೀಡಲಾಗುವ ಮಾಜಿ ಪ್ರಧಾನಿ ರಾಜೀವ್ ಗಾಂಧಿ ರಾಜ್ಯಮಟ್ಟದ ಶ್ರೇಷ್ಠ ಶಿಕ್ಷಕ ಪ್ರಶಸ್ತಿಗೆ ಲಕ್ಷ್ಮೇಶ್ವರ ತಾಲೂಕಿನ ಕೊಂಡಿಕೊಪ್ಪ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಎಂ.ಎಸ್. ಹಿರೇಮಠ ಆಯ್ಕೆಯಾಗಿದ್ದಾರೆ.

ಹಿರೇಮಠ ಅವರು ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ವಿಶಿಷ್ಟ ಸೇವೆ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ನೀಡಿರುವ ಕೊಡುಗೆ ಹಾಗೂ ಸಮಾಜಮುಖಿ ಚಟುವಟಿಕೆಗಳನ್ನು ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಸೆಪ್ಟೆಂಬರ್ 5ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಭಾರತ್ ಜೋಡೋ ಭವನದಲ್ಲಿ ನಡೆಯುವ ಸಮಾರಂಭದಲ್ಲಿ ಎಂ.ಎಸ್. ಹಿರೇಮಠ ಅವರಿಗೆ ರಾಜ್ಯಮಟ್ಟದ ಶ್ರೇಷ್ಠ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಲಾಗುವುದು.

# ಬೆನಹಾಳ ಶಾಲೆಯಲ್ಲಿ ಕೃಷ್ಣ ಜನ್ಮಾಷ್ಟಮಿ ಸಂಭ್ರಮ



**ವಿಜಯಸಾಕ್ಷಿ ಸುದ್ದಿ, ರೋಣ**

ತಾಲೂಕಿನ ಬೆನಹಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಶ್ರದ್ಧೆ, ಸಂಭ್ರಮ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು.

ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಶಾಲಾ ಮಕ್ಕಳು ಶ್ರೀಕೃಷ್ಣ, ರಾಧೆ ಸೇರಿದಂತೆ ವಿವಿಧ ಪೌರಾಣಿಕ ಪಾತ್ರಗಳ ವೇಷಭೂಷಣ ಧರಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಂಸ್ಕೃತಿಕ ಮೆರವಣಿಗೆ ನಡೆಸಿದರು. ಪುಟಾಣಿ ಮಕ್ಕಳ ಆಕರ್ಷಕ ವೇಷಭೂಷಣ ಹಾಗೂ ನೃತ್ಯ ಪ್ರದರ್ಶನ ಗ್ರಾಮಸ್ಥರ ಕಣ್ಮನ ಸೆಳೆಯಿತು.

ಮೆರವಣಿಗೆಯ ಬಳಿಕ ಶಾಲಾ ಆವರಣದಲ್ಲಿ ಸಾಂಪ್ರದಾಯಿಕವಾಗಿ ಬೆಣ್ಣೆ ಗಡಿಗೆ ಒಡೆಯುವ ಸ್ಪರ್ಧೆ ಆಯೋಜಿಸಲಾಗಿತ್ತು. ಮಕ್ಕಳು ಅತ್ಯಂತ ಉತ್ಸಾಹ ಮತ್ತು ಸಡಗರದಿಂದ ಸ್ಪರ್ಧೆಯಲ್ಲಿ ಪಾಲ್ಗೊಂಡು ಕೃಷ್ಣ ಜನ್ಮಾಷ್ಟಮಿಯ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿದರು. ಶಾಲೆಯ ಮುಖ್ಯೋಪಾಧ್ಯಾಯ ಸಿ.ಎನ್. ಜೋಗಿ ಅವರ ಮಾರ್ಗದರ್ಶನದಲ್ಲಿ ಶಿಕ್ಷಕರಾದ ಬಿ.ಟಿ. ಅಡ್ನೂರ್, ಎಂ.ಐ. ಮುಲ್ಲಾ, ಡಿ.ಎನ್. ಗುಡೂರ್, ಎಚ್.ಎಂ. ರತ್ನಾಕರ್ ಹಾಗೂ ಎಸ್.ವಿ. ಪಾಟೀಲ ಅವರು ಮಕ್ಕಳೊಂದಿಗೆ ಸಕ್ರಿಯವಾಗಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿ ಕೃಷ್ಣ ಜನ್ಮಾಷ್ಟಮಿಯ ಸಂಭ್ರಮವನ್ನು ಹಂಚಿಕೊಂಡರು.

# ವಿದ್ಯಾರ್ಥಿಗಳ ಬದುಕಿಗೆ ಬೆಳಕಾದ ಸಂತ ಶಿಕ್ಷಕ ಬಿ.ಜಿ. ಅಣ್ಣಿಗೇರಿ

ಶಿಕ್ಷಕ ಎಂದರೆ ಕೇವಲ ಪಾಠ ಹೇಳುವ ವ್ಯಕ್ತಿಯಲ್ಲ, ವಿದ್ಯಾರ್ಥಿಯ ಬದುಕನ್ನು ರೂಪಿಸುವ ಮಾರ್ಗದರ್ಶಿ. ಈ ಮಾತಿಗೆ ಗದಗಿನ "ಗಾಂಧಿ", "ಶಿಕ್ಷಣ ಭೀಷ್ಮ" ಹಾಗೂ "ಸಂತ ಶಿಕ್ಷಕ" ಎಂದೇ ಖ್ಯಾತರಾದ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳು ಜೀವಂತ ಉದಾಹರಣೆಯಾಗಿದ್ದರು.

ಜುಲೈ 23, 1930ರಂದು ಗದಗ ಜಿಲ್ಲೆಯ ರೋಣ ತಾಲೂಕಿನ ಮುದೇನಗುಡಿ ಗ್ರಾಮದ ಬಡ ಕುಟುಂಬದಲ್ಲಿ ಗುರುಪ್ಪ ಮತ್ತು ಭೋರಮ್ಮ ದಂಪತಿಯ ಪುತ್ರರಾಗಿ ಜನಿಸಿದ ಬಸವಂತಪ್ಪ ಗುರಪ್ಪ ಅಣ್ಣಿಗೇರಿ ಅವರು, ಸರಳತೆಯಲ್ಲಿಯೇ ಶ್ರೇಷ್ಠತೆಯನ್ನು ಕಂಡ ಮಹನೀಯರಾಗಿದ್ದರು. ಬಾಲ್ಯದಲ್ಲಿಯೇ ಬಾಜೀರಾವ ವೈ. ಕುಲಕರ್ಣಿ ಅವರಂತಹ ಆದರ್ಶ ಶಿಕ್ಷಕರ ಮಾರ್ಗದರ್ಶನ ಪಡೆದ ಅವರು, ಧಾರವಾಡದ ಕರ್ನಾಟಕ ಕಾಲೇಜಿನಲ್ಲಿ ಬಿ.ಎ. ಪದವಿ ಪಡೆದರು. ಆಧ್ಯಾತ್ಮಿಕ ಚಿಂತನೆ, ಧ್ಯಾನ, ಯೋಗ ಹಾಗೂ ಶಿಸ್ತಿನ ಬದುಕು ಅವರ ವ್ಯಕ್ತಿತ್ವದ ಅವಿಭಾಜ್ಯ ಅಂಗಗಳಾಗಿದ್ದವು.

1954ರಲ್ಲಿ ಗದಗಿನ ಮಾಡೆಲ್ ಹೈಸ್ಕೂಲ್‌ನಲ್ಲಿ ಶಿಕ್ಷಕ ವೃತ್ತಿ ಆರಂಭಿಸಿದ ಅಣ್ಣಿಗೇರಿ ಗುರುಗಳ ಬದುಕು ಕ್ರಮೇಣ ಸಾವಿರಾರು ವಿದ್ಯಾರ್ಥಿಗಳ ಬದುಕಿನ ಆಶಾಕಿರಣವಾಯಿತು. ಸಣ್ಣ ಕೋಣೆಯೊಂದರಲ್ಲಿ ವಾಸಿಸುತ್ತಿದ್ದ ಅವರು, ಹಳ್ಳಿಗಳಿಂದ ಬಂದ ಬಡ ವಿದ್ಯಾರ್ಥಿಗಳಿಗೆ ತಮ್ಮ ಆಶ್ರಯದಲ್ಲಿಯೇ ಉಚಿತ ಶಿಕ್ಷಣ, ಊಟ ಹಾಗೂ ವಸತಿ ಸೌಲಭ್ಯ ಒದಗಿಸುತ್ತಿದ್ದರು. ತಮ್ಮ ಸಂಬಳದ ಬಹುಪಾಲನ್ನು ವಿದ್ಯಾರ್ಥಿಗಳ ಸೇವೆಗಾಗಿಯೇ ಮೀಸಲಿಟ್ಟಿದ್ದರು.

ಬೆಳಿಗ್ಗೆ ಮತ್ತು ಸಾಯಂಕಾಲ ನೂರಾರು ವಿದ್ಯಾರ್ಥಿಗಳಿಗೆ ಗಣಿತ ಹಾಗೂ ಇಂಗ್ಲಿಷ್ ಬೋಧಿಸುತ್ತಿದ್ದ ಅಣ್ಣಿಗೇರಿ ಗುರುಗಳು,



ಕಠಿಣವೆನಿಸುವ ಗಣಿತ ವಿಷಯವನ್ನೂ ಅತ್ಯಂತ ಸರಳವಾಗಿ, ವಿದ್ಯಾರ್ಥಿಗಳ ಮನಮುಟ್ಟುವಂತೆ ಕಲಿಸುವ ಅಪೂರ್ವ ಸಾಮರ್ಥ್ಯ ಹೊಂದಿದ್ದರು. ಅವರ ಪಾಲಿಗೆ ಶಿಕ್ಷಣವು ಕೇವಲ ಉದ್ಯೋಗವಾಗಿರಲಿಲ್ಲ; ಅದು ಬದುಕಿನ ಧ್ಯೇಯವಾಗಿತ್ತು.

ವಿದ್ಯಾರ್ಥಿಗಳ ಸರಿ–ತಪ್ಪುಗಳನ್ನು ತಿದ್ದಿ, ಅವರಲ್ಲಿ ಆತ್ಮವಿಶ್ವಾಸ, ಶಿಸ್ತು ಹಾಗೂ ಉತ್ತಮ ವ್ಯಕ್ತಿತ್ವವನ್ನು ಬೆಳೆಸುವುದು ಅವರ ಶಿಕ್ಷಣದ ಪ್ರಮುಖ ಉದ್ದೇಶವಾಗಿತ್ತು. ಯಾವುದೇ ಪ್ರತಿಫಲದ ನಿರೀಕ್ಷೆಯಿಲ್ಲದೆ ಆರು ದಶಕಗಳಿಗೂ ಹೆಚ್ಚು ಕಾಲ ವಿದ್ಯಾರ್ಥಿಗಳ ಸೇವೆಯಲ್ಲಿ ತೊಡಗಿಸಿಕೊಂಡ ಅವರು, ನಿವೃತ್ತಿಯ ನಂತರವೂ ತಮ್ಮ ಬೋಧನಾ ಸೇವೆಯನ್ನು ನಿಲ್ಲಿಸಲಿಲ್ಲ. ನವೋದಯ ಪ್ರವೇಶ ಪರೀಕ್ಷೆಗೆ ವಿದ್ಯಾರ್ಥಿಗಳಿಗೆ ಉಚಿತ ತರಬೇತಿ ನೀಡುತ್ತಾ ತಮ್ಮ ಕೊನೆಯ ಉಸಿರಿನವರೆಗೂ ಶಿಕ್ಷಣ ಸೇವೆಯನ್ನು ಮುಂದುವರಿಸಿದರು.

ಸೆಪ್ಟೆಂಬರ್ 5, 2019ರಂದು ತಮ್ಮ 89ನೇ ವಯಸ್ಸಿನಲ್ಲಿ ಲಿಂಗೈಕ್ಯರಾದ ಅಣ್ಣಿಗೇರಿ ಗುರುಗಳು ದೈಹಿಕವಾಗಿ ನಮ್ಮೊಂದಿಗಿಲ್ಲದಿದ್ದರೂ, ಅವರು ಹಾಕಿಕೊಟ್ಟ ಸೇವಾ ಪರಂಪರೆ ಇಂದಿಗೂ ಜೀವಂತವಾಗಿದೆ. ಅವರ ಪಿಂಚಣಿ ಹಣ ಹಾಗೂ ಶಿಷ್ಯರು ನೀಡಿದ ಕೊಡುಗೆಗಳಿಂದ ಸ್ಥಾಪಿತವಾದ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಅವರ ಆಶಯ ಮತ್ತು ಆದರ್ಶಗಳನ್ನು ಮುಂದುವರಿಸಿಕೊಂಡು ಸಾಗುತ್ತಿದೆ.

ಪಿಯುಸಿಯಲ್ಲಿ ಉತ್ತಮ ಸಾಧನೆ ಮಾಡಿದ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕಾಗಿ ಪ್ರೋತ್ಸಾಹಧನ ನೀಡಲಾಗುತ್ತಿದೆ. ಸರ್ಕಾರಿ ಶಾಲೆಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಬಹುಮಾನ, ಶಾಲಾ ಬ್ಯಾಗ್, ಪ್ರಮಾಣಪತ್ರ ಹಾಗೂ ಇತರ ಪ್ರೋತ್ಸಾಹಗಳನ್ನು ನೀಡುವ ಕಾರ್ಯವೂ ನಿರಂತರವಾಗಿ ನಡೆಯುತ್ತಿದೆ.

ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಇಂದಿಗೂ 8ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಗಣಿತ, ವಿಜ್ಞಾನ ಮತ್ತು ಇಂಗ್ಲಿಷ್ ವಿಷಯಗಳಲ್ಲಿ ಉಚಿತ ಬೋಧನೆ ನೀಡಲಾಗುತ್ತಿದೆ.

ಹಳ್ಳಿಗಳ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣದ ವ್ಯವಸ್ಥೆ ಕಲ್ಪಿಸಲಾಗಿದೆ. ಪ್ರಸ್ತುತ 14 ವಿದ್ಯಾರ್ಥಿಗಳು ಆಶ್ರಮದಲ್ಲಿ ಈ ಸೌಲಭ್ಯವನ್ನು ಪಡೆಯುತ್ತಿದ್ದಾರೆ.

ಆಧುನಿಕ ಬೋಧನಾ ವ್ಯವಸ್ಥೆಯೊಂದಿಗೆ ತರಗತಿಗಳು ನಡೆಯುತ್ತಿದ್ದರೂ, ಅಣ್ಣಿಗೇರಿ ಗುರುಗಳು ಪ್ರತಿಪಾದಿಸಿದ ಗುರು–ಶಿಷ್ಯ ಪರಂಪರೆಯ ಸೇವಾ ಮನೋಭಾವ ಅಚಲವಾಗಿ ಮುಂದುವರಿದಿದೆ. 2026–27ನೇ ಸಾಲಿನ ಬೇಸಿಗೆ ಶಿಬಿರದಲ್ಲಿ ಸುಮಾರು 650ರಿಂದ 700 ವಿದ್ಯಾರ್ಥಿಗಳು ಉಚಿತ ಶಿಕ್ಷಣ ಪಡೆದಿರುವುದು ಈ ಸೇವಾ ಪರಂಪರೆಯ ವ್ಯಾಪ್ತಿ ಮತ್ತು ಮಹತ್ವಕ್ಕೆ ಸಾಕ್ಷಿಯಾಗಿದೆ.

ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ವಿಶಾಲವಾದ ತರಗತಿ ಕೊಠಡಿ ನಿರ್ಮಿಸುವ ಕಾರ್ಯಕ್ಕೂ ಚಾಲನೆ ನೀಡಲಾಗಿದೆ. ಇದು ಅಣ್ಣಿಗೇರಿ ಗುರುಗಳ ಕನಸಿನ ಶಿಕ್ಷಣ ಸೇವೆಯನ್ನು ಇನ್ನಷ್ಟು ವಿದ್ಯಾರ್ಥಿಗಳ ಬದುಕಿಗೆ ತಲುಪಿಸುವ ಮಹತ್ವದ ಹೆಜ್ಜೆಯಾಗಿದೆ.

ಅಣ್ಣಿಗೇರಿ ಗುರುಗಳು ಕಲ್ಲಿನಂತಿದ್ದ ವಿದ್ಯಾರ್ಥಿಗಳ ಬದುಕನ್ನು ಸುಂದರ ಮೂರ್ತಿಗಳನ್ನಾಗಿ ರೂಪಿಸಿದ ಅಪರೂಪದ ಶಿಲ್ಪಿಯಾಗಿದ್ದರು. ಅವರ ಬದುಕು ನಮಗೆ ಒಂದು ಮಹತ್ವದ ಸಂದೇಶ ನೀಡುತ್ತದೆ. ಶಿಕ್ಷಣದ ನಿಜವಾದ ಅರ್ಥ ಕೇವಲ ಜ್ಞಾನವನ್ನು ಹಂಚುವುದಲ್ಲ, ಮತ್ತೊಬ್ಬರ ಬದುಕನ್ನು ಬೆಳಗಿಸುವುದಾಗಿದೆ.

ಗುರುಗಳು ಇಂದು ನಮ್ಮ ನಡುವೆ ದೈಹಿಕವಾಗಿ ಇಲ್ಲದಿದ್ದರೂ, ಅವರ ಆದರ್ಶ, ಶಿಸ್ತು, ಸರಳತೆ ಹಾಗೂ ನಿಸ್ವಾರ್ಥ ಸೇವೆಯ ಬೆಳಕು ಇಂದಿಗೂ ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾಗಿದೆ. ಶಿಕ್ಷಕರ ದಿನಾಚರಣೆಯ ಸಂದರ್ಭದಲ್ಲಿ ಅವರ ಪುಣ್ಯಸ್ಮರಣೆಯನ್ನು ಆಚರಿಸುವುದು ಎಂದರೆ ಕೇವಲ ಒಬ್ಬ ಮಹಾನ್ ಶಿಕ್ಷಕರನ್ನು ನೆನೆಯುವುದಲ್ಲ; ಅವರು ಬದುಕಿನುದ್ದಕ್ಕೂ ಪಾಲಿಸಿದ ನಿಸ್ವಾರ್ಥ ಶಿಕ್ಷಣ ಸೇವೆಯ ಆದರ್ಶವನ್ನು ಮುಂದುವರಿಸುವ ಸಂಕಲ್ಪ ಮಾಡುವುದು ಕೂಡ ಆಗಿದೆ.

**–ಮಂಜುಳಾ ತುಂಬರಮಟ್ಟಿ**
**ಶಿಕ್ಷಕಿ, ಬಿ.ಜಿ. ಅಣ್ಣಿಗೇರಿ ಆಶ್ರಮ, ಗದಗ.**

### ಮುಂದಿನ ಕಂತಿನ ಹಣಕ್ಕೆ ಅ. 31ರೊಳಗೆ ಪ್ರಕ್ರಿಯೆ ಪೂರ್ಣಗೊಳಿಸಲು ರೈತರಿಗೆ ಸೂಚನೆ

# ಪಿಎಂ ಕಿಸಾನ್‌ಗೆ ಇ–ಕೆವೈಸಿ ಕಡ್ಡಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಅರ್ಹ ಫಲಾನುಭವಿಗಳಿಗೆ ಮುಂದಿನ ಕಂತಿನ ಹಣ ಜಮೆಯಾಗಬೇಕಾದರೆ ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ನಕಲಿ ಫಲಾನುಭವಿಗಳನ್ನು ಗುರುತಿಸಿ ಪಟ್ಟಿಯಿಂದ ಹೊರಗಿಡುವುದು ಹಾಗೂ ಅರ್ಹ ರೈತರಿಗೆ ಪಾರದರ್ಶಕವಾಗಿ ಯೋಜನೆಯ ಹಣ ತಲುಪಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಹೊಸ ಮಾರ್ಗಸೂಚಿ ಜಾರಿಗೊಳಿಸಿದೆ.

ಈ ಹಿಂದೆ ಆಧಾರ್ ಒಟಿಪಿ ಮೂಲಕವೂ ಇ–ಕೆವೈಸಿ ಮಾಡಿಕೊಳ್ಳಲು ನಿಖರ ಪರಿಶೀಲನೆ ಹಾಗೂ ಯೋಜನೆಯ ಸೌಲಭ್ಯ ಅರ್ಹ ರೈತರಿಗೆ ಮಾತ್ರ ತಲುಪುವುದನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ ಇದೀಗ ಬಯೋಮೆಟ್ರಿಕ್ ಅಥವಾ ಮುಖಚಹರೆ ಆಧಾರಿತ ಇ–ಕೆವೈಸಿ ಕಡ್ಡಾಯಗೊಳಿಸಲಾಗಿದೆ.

ಕೇಂದ್ರ ಸರ್ಕಾರದಿಂದ ಇದುವರೆಗೆ ಪಿಎಂ ಕಿಸಾನ್ ಯೋಜನೆಯ 23 ಕಂತುಗಳ ಹಣ ಫಲಾನುಭವಿಗಳ ಖಾತೆಗೆ ಜಮೆಯಾಗಿದೆ. ಮುಂದಿನ ಕಂತಿನ ಹಣ ಪಡೆಯಲು ಫಲಾನುಭವಿಗಳು ಅಗತ್ಯ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಬೇಕು ಎಂದು ಕೃಷಿ ಇಲಾಖೆ ತಿಳಿಸಿದೆ.

*ಅಕ್ಟೋಬರ್ 31ರೊಳಗೆ ಇ–ಕೆವೈಸಿ*

ಸರ್ಕಾರದ ನೂತನ ಮಾರ್ಗಸೂಚಿಗಳ ಅನ್ವಯ, ಮುಂದಿನ ಕಂತಿನ ಹಣ ರೈತರ ಆಧಾರ್ ಸಂಯೋಜಿತ ಬ್ಯಾಂಕ್ ಖಾತೆಗೆ ಜಮೆಯಾಗಬೇಕಾದರೆ ಭೂ ದಾಖಲೆಗಳ ಪರಿಶೀಲನೆ, ಬ್ಯಾಂಕ್ ಖಾತೆಯೊಂದಿಗೆ ಆಧಾರ್ ಜೋಡಣೆ ಹಾಗೂ ಇ–ಕೆವೈಸಿ ಪ್ರಕ್ರಿಯೆಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಬೇಕಾಗಿದೆ. ರೈತರು ಅಕ್ಟೋಬರ್ 31ರೊಳಗೆ ಈ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ.

ಡಿಬಿಟಿ ಮೂಲಕ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣ ಜಮೆಯಾಗುತ್ತಿದ್ದರೂ, ಮುಂದಿನ ಕಂತಿನ ಬಿಡುಗಡೆಗೆ ಕೇಂದ್ರ ಸರ್ಕಾರ ಹೊಸ ಮಾರ್ಗಸೂಚಿ ಹೊರಡಿಸಿದೆ. ಬ್ಯಾಂಕ್ ಖಾತೆಯೊಂದಿಗೆ ಆಧಾರ್ ಸಂಖ್ಯೆಯನ್ನು ಎನ್‌ಪಿಸಿಐ ಮೂಲಕ ಜೋಡಣೆ ಮಾಡಿಸಿದ್ದರೂ ಸಹ ಬಯೋಮೆಟ್ರಿಕ್ ಅಥವಾ ಆಧಾರ್ ಫೇಸ್ ಆಧಾರಿತ ಇ–ಕೆವೈಸಿ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ.

ಮೃತ ಫಲಾನುಭವಿಗಳನ್ನು ಪಟ್ಟಿಯಿಂದ ಕೈಬಿಟ್ಟು, ಅರ್ಹ ರೈತರನ್ನು ಗುರುತಿಸಿ ಯೋಜನೆಯ ಸೌಲಭ್ಯವನ್ನು ಸರಿಯಾದ ಫಲಾನುಭವಿಗಳಿಗೆ




ತಲುಪಿಸುವುದು ಈ ಕ್ರಮದ ಪ್ರಮುಖ ಉದ್ದೇಶವಾಗಿದೆ.

*ಗದಗ ಜಿಲ್ಲೆಯಲ್ಲಿ 1.18 ಲಕ್ಷ ಫಲಾನುಭವಿಗಳು*

ಗದಗ ಜಿಲ್ಲೆಯಲ್ಲಿ ಒಟ್ಟು 1,18,712 ಪ್ರಧಾನಮಂತ್ರಿ ಕಿಸಾನ್ ಫಲಾನುಭವಿಗಳು ಇದ್ದಾರೆ. ತಾಲೂಕುವಾರು ಗದಗದಲ್ಲಿ 26,866, ನರಗುಂದದಲ್ಲಿ 13,201, ಗಜೇಂದ್ರಗಡದಲ್ಲಿ 319, ರೋಣದಲ್ಲಿ 34,800, ಶಿರಹಟ್ಟಿಯಲ್ಲಿ 25,007, ಮುಂಡರಗಿಯಲ್ಲಿ 18,073 ಹಾಗೂ ಲಕ್ಷ್ಮೇಶ್ವರದಲ್ಲಿ 446 ಫಲಾನುಭವಿಗಳಿದ್ದಾರೆ ಎಂದು ಕೃಷಿ ಇಲಾಖೆ ತಿಳಿಸಿದೆ.

ಜಿಲ್ಲೆಯ ಬಹುತೇಕ ಫಲಾನುಭವಿಗಳು ಇನ್ನೂ ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಬೇಕಿದ್ದು, ರೈತರು ಬಯೋಮೆಟ್ರಿಕ್ ಅಥವಾ ಮೊಬೈಲ್ ಪ್ ಮೂಲಕ ಇ–ಕೆವೈಸಿಯನ್ನು ಶೀಘ್ರ ಪೂರ್ಣಗೊಳಿಸುವಂತೆ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಮನವಿ ಮಾಡಿದ್ದಾರೆ.

*ವರ್ಷಕ್ಕೆ 6 ಸಾವಿರ ರೂ. ಸಹಾಯಧನ*

ಕೇಂದ್ರ ಸರ್ಕಾರವು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು 2019ರ ಫೆಬ್ರವರಿಯಿಂದ ಜಾರಿಗೊಳಿಸಿದೆ. ಅರ್ಹ ರೈತ ಕುಟುಂಬಗಳಿಗೆ ವಾರ್ಷಿಕ 6 ಸಾವಿರ ರೂ. ಆರ್ಥಿಕ ನೆರವು ನೀಡಲಾಗುತ್ತದೆ.

ವರ್ಷಕ್ಕೆ ಮೂರು ಕಂತುಗಳಲ್ಲಿ ತಲಾ 2 ಸಾವಿರ ರೂ.ಗಳಂತೆ, ಪ್ರತಿ ನಾಲ್ಕು ತಿಂಗಳಿಗೊಮ್ಮೆ ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಹಣ ಜಮೆ ಮಾಡಲಾಗುತ್ತದೆ.

*ಎಲ್ಲಿ ಇ–ಕೆವೈಸಿ ಮಾಡಿಸಬಹುದು?*

ಫಲಾನುಭವಿಗಳು ಬಯೋಮೆಟ್ರಿಕ್ ಅಥವಾ ಫೇಸ್ ಆಧಾರಿತ ವಿಧಾನಗಳಲ್ಲಿ ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಂಡು ಇ–ಕೆವೈಸಿ ಪೂರ್ಣಗೊಳಿಸಬಹುದು.

ಬಯೋಮೆಟ್ರಿಕ್ ಮೂಲಕ ಇ–ಕೆವೈಸಿಯನ್ನು ಸಾಮಾನ್ಯ ಸೇವಾ ಕೇಂದ್ರಗಳು (ಸಿಎಸ್ಸಿ), ರಾಜ್ಯ ಸೇವಾ ಕೇಂದ್ರಗಳಾದ ಗ್ರಾಮ ಒನ್, ಕರ್ನಾಟಕ ಒನ್ ಹಾಗೂ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ಮಾಡಿಸಿಕೊಳ್ಳಬಹುದು.

ಬೆರಳಚ್ಚಿನ ಮೂಲಕ ಇ–ಕೆವೈಸಿ ಸಾಧ್ಯವಾಗದ ಫಲಾನುಭವಿಗಳಿಗಾಗಿ ಪಿಎಂ ಕಿಸಾನ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಫೇಸ್ ಅಥೆಂಟಿಕೇಷನ್ ವ್ಯವಸ್ಥೆಯನ್ನೂ ಅಳವಡಿಸಲಾಗಿದೆ. ಮೊಬೈಲ್‌ನಲ್ಲಿಯೇ ಸ್ವಯಂಪ್ರೇರಿತವಾಗಿ ಮುಖಚಹರೆ ಆಧಾರಿತ ಇ–ಕೆವೈಸಿ ಮಾಡಿಕೊಳ್ಳ ಬಹುದು.

*ಮೊಬೈಲ್‌ನಲ್ಲೇ ಇ–ಕೆವೈಸಿ ಹೇಗೆ?*

ಗೂಗಲ್ ಪ್ಲೇ ಸ್ಟೋರ್‌ನಿಂದ ಪಿಎಂ ಕಿಸಾನ್ ಮೊಬೈಲ್ ಹಾಗೂ ಆಧಾರ್ ಫೇಸ್ ಆರ್‌ಡಿ ಅನ್ನು ಮೊಬೈಲ್‌ನಲ್ಲಿ ಇನ್‌ಸ್ಟಾಲ್ ಮಾಡಿಕೊಳ್ಳಬೇಕು. ಬಳಿಕ ನೋಂದಾಯಿತ ಮೊಬೈಲ್ ಸಂಖ್ಯೆಯ ಮೂಲಕ ಲಾಗಿನ್ ಆಗಿ, ಆಧಾರ್ ಸಂಖ್ಯೆ ನಮೂದಿಸಬೇಕು.

ನಂತರ ಮುಖಚಹರೆ ಸ್ಕ್ಯಾನ್ ಮಾಡಲು ಒಪ್ಪಿಗೆ ನೀಡಿದ ಬಳಿಕ ಫೇಸ್ ಅಥೆಂಟಿಕೇಷನ್ ಮೂಲಕ ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳ್ಳುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುರು ಎಂಬ ಬೆಳಕು: ಅಕ್ಷರದಾಚೆ ಬದುಕು ಕಲಿಸುವ ಶಿಕ್ಷಕ

ಮನುಷ್ಯನ ಬದುಕಿನಲ್ಲಿ ಕೆಲವು ವ್ಯಕ್ತಿಗಳ ಪ್ರಭಾವವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ. ಅಂತಹ ಮಹತ್ವದ ವ್ಯಕ್ತಿಗಳಲ್ಲಿ ಶಿಕ್ಷಕರ ಸ್ಥಾನ ಅತ್ಯಂತ ವಿಶಿಷ್ಟವಾದುದು. ತಾಯಿ–ತಂದೆಯರು ಮಗುವಿಗೆ ಜನ್ಮ ನೀಡಿದರೆ, ಶಿಕ್ಷಕರು ಆ ಬದುಕಿಗೆ ಜ್ಞಾನ, ಸಂಸ್ಕಾರ, ಮೌಲ್ಯ ಮತ್ತು ಸರಿಯಾದ ದಿಕ್ಕನ್ನು ನೀಡುತ್ತಾರೆ. ಹೀಗಾಗಿ ಶಿಕ್ಷಕ ಎಂದರೆ ಕೇವಲ ಪಾಠ ಬೋಧಿಸುವ ವ್ಯಕ್ತಿಯಲ್ಲ; ವಿದ್ಯಾರ್ಥಿಯ ವ್ಯಕ್ತಿತ್ವವನ್ನು ರೂಪಿಸುವ ಶಿಲ್ಪಿ, ಕನಸುಗಳಿಗೆ ರೆಕ್ಕೆ ನೀಡುವ ಮಾರ್ಗದರ್ಶಿ.

ಪ್ರತಿ ವರ್ಷ ಸೆಪ್ಟೆಂಬರ್ 5ರಂದು ದೇಶಾದ್ಯಂತ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಭಾರತದ ಮಹಾನ್ ತತ್ವಜ್ಞಾನಿ, ಶಿಕ್ಷಣತಜ್ಞ ಹಾಗೂ ಮಾಜಿ ರಾಷ್ಟ್ರಪತಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಸ್ಮರಣಾರ್ಥ ಈ ದಿನವನ್ನು ಶಿಕ್ಷಕರ ದಿನವನ್ನಾಗಿ ಆಚರಿಸಲಾಗುತ್ತದೆ. ಶಿಕ್ಷಕರ ಸೇವೆ, ತ್ಯಾಗ, ಸಮರ್ಪಣೆ ಹಾಗೂ ಸಮಾಜ ನಿರ್ಮಾಣದಲ್ಲಿ ಅವರ ಅಮೂಲ್ಯ ಕೊಡುಗೆಯನ್ನು ಸ್ಮರಿಸುವ ಮಹತ್ವದ ದಿನ ಇದಾಗಿದೆ.

ಶಾಲೆಯ ಮೊದಲ ದಿನ ಮಗುವಿನ ಕೈಹಿಡಿದು ಅಕ್ಷರ ಲೋಕಕ್ಕೆ ಪರಿಚಯಿಸುವ ಶಿಕ್ಷಕ, ಮುಂದೆ ಅದೇ ಮಗುವಿನ ಕನಸುಗಳಿಗೆ ರೆಕ್ಕೆ ಕಟ್ಟುತ್ತಾನೆ. ಪುಸ್ತಕದ ಪಾಠದ ಜೊತೆಗೆ ಬದುಕಿನ ಪಾಠವನ್ನೂ ಕಲಿಸುತ್ತಾನೆ. ಸೋತಾಗ ಕುಗ್ಗದೆ ಮತ್ತೆ ಪ್ರಯತ್ನಿಸುವುದು, ತಪ್ಪಾದಾಗ ತಿದ್ದಿಕೊಳ್ಳುವುದು, ಯಶಸ್ಸಿನ ಸಂದರ್ಭದಲ್ಲಿ ವಿನಯದಿಂದ ಇರುವುದು ಹಾಗೂ ಸಮಾಜದ ಬಗ್ಗೆ ಜವಾಬ್ದಾರಿಯಿಂದ ನಡೆದುಕೊಳ್ಳುವುದನ್ನು ಕಲಿಸುವವನೇ ನಿಜವಾದ ಶಿಕ್ಷಕ.

ಇಂದಿನ ತಂತ್ರಜ್ಞಾನ ಯುಗದಲ್ಲಿ ಜ್ಞಾನ ಮತ್ತು ಮಾಹಿತಿಯನ್ನು ಪಡೆಯಲು ಅನೇಕ ಮಾರ್ಗಗಳಿವೆ. ಮೊಬೈಲ್, ಇಂಟರ್‌ನೆಟ್ ಮತ್ತು ಕೃತಕ ಬುದ್ಧಿಮತ್ತೆಯಂತಹ ಸಾಧನಗಳು ನಮ್ಮ ಕೈಯಲ್ಲಿವೆ. ಆದರೆ ಯಾವುದು ಸರಿಯಾದ ಜ್ಞಾನ? ಅದನ್ನು ಹೇಗೆ ಬಳಸಬೇಕು? ಬದುಕಿನಲ್ಲಿ ಯಾವ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು? ಎಂಬುದನ್ನು ತಿಳಿಸಿಕೊಡುವ ಮಾನವೀಯ ಮಾರ್ಗದರ್ಶನದ ಅಗತ್ಯ ಎಂದಿಗೂ ಕಡಿಮೆಯಾಗುವುದಿಲ್ಲ.

ಒಬ್ಬ ವಿದ್ಯಾರ್ಥಿ ಮುಂದೆ ವೈದ್ಯನಾಗಬಹುದು, ವಿಜ್ಞಾನಿಯಾಗಬಹುದು, ಅಧಿಕಾರಿಯಾಗಬಹುದು, ಉದ್ಯಮಿಯಾಗಬಹುದು ಅಥವಾ ಸಮಾಜ ಸೇವಕನಾಗಬಹುದು. ಆದರೆ ಆತನ ಯಶಸ್ಸಿನ ಪಯಣದ ಆರಂಭದಲ್ಲಿ ದಾರಿ ತೋರಿಸಿದ ಒಬ್ಬ ಶಿಕ್ಷಕನ ಪ್ರೇರಣೆ ಖಂಡಿತವಾಗಿಯೂ ಇರುತ್ತದೆ. ಕೆಲವೊಮ್ಮೆ ಶಿಕ್ಷಕರ ಒಂದೇ ಒಂದು ಮಾತು ವಿದ್ಯಾರ್ಥಿಯ ಬದುಕನ್ನೇ ಬದಲಾಯಿಸಬಲ್ಲದು. "ನೀನು ಮಾಡಬಲ್ಲೆ" ಎಂಬ ಶಿಕ್ಷಕರ ವಿಶ್ವಾಸದ ಮಾತು ಆತ್ಮವಿಶ್ವಾಸ ಕಳೆದುಕೊಂಡ ವಿದ್ಯಾರ್ಥಿಗೆ ಹೊಸ ಧೈರ್ಯ ನೀಡುತ್ತದೆ.

ಶಿಕ್ಷಕರನ್ನು ಗೌರವಿಸುವುದು ಎಂದರೆ ಕೇವಲ ಒಂದು ದಿನ ಹೂವು ನೀಡಿ ಶುಭಾಶಯ ಹೇಳುವುದಲ್ಲ. ಅವರು ಕಲಿಸಿದ ಉತ್ತಮ ಮೌಲ್ಯಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ.

ಅಕ್ಷರ ಕಲಿಸುವವರು ಹಲವರಿರಬಹುದು; ಆದರೆ ಅಕ್ಷರದಾಚೆ ಬದುಕಿನ ಅರ್ಥ ಕಲಿಸುವವರೇ ನಿಜವಾದ ಗುರು.

ದೀಪವು ತಾನು ಬೆಳಗುತ್ತಾ ಸುತ್ತಲಿನ ಕತ್ತಲೆಯನ್ನು ದೂರ ಮಾಡುವಂತೆ, ಶಿಕ್ಷಕನು ತನ್ನ ಜ್ಞಾನವನ್ನು ಹಂಚಿಕೊಳ್ಳುತ್ತಾ ಅನೇಕ ಬದುಕುಗಳಿಗೆ ಬೆಳಕಾಗುತ್ತಾನೆ. ಇಂತಹ ಜ್ಞಾನದೀಪಗಳನ್ನು ಗೌರವಿಸುವುದು



ನಮ್ಮೆಲ್ಲರ ಕರ್ತವ್ಯವಾಗಲಿ.

ನಾಡಿನ ಸಮಸ್ತ ಶಿಕ್ಷಕರಿಗೆ ಶಿಕ್ಷಕರ ದಿನಾಚರಣೆಯ ಹಾರ್ದಿಕ ಶುಭಾಶಯಗಳು!

**–ಶ್ರೀಮತಿ ಚಂದ್ರಕಲಾ ಎಂ. ಇಟಗಿಮಠ**

### ರಜೆ ದಿನಗಳನ್ನೂ ವಿದ್ಯಾರ್ಥಿಗಳ ಭವಿಷ್ಯಕ್ಕೆ ಮೀಸಲಿಟ್ಟು ವಿಜ್ಞಾನ ಜ್ಞಾನ ಹಂಚುತ್ತಿರುವ ಶಿಕ್ಷಕ

## ಮಕ್ಕಳ ಬಾಳಿಗೆ ಬೆಳಕಾಗಿರುವ ಅಪರೂಪದ ಸಂಪನ್ಮೂಲ ವ್ಯಕ್ತಿ: ಎಂ.ಎಚ್. ಸವದತ್ತಿ

ಸರ್ಕಾರಿ ಸೇವೆ ಎಂದರೆ ಕೇವಲ ಕರ್ತವ್ಯ ನಿರ್ವಹಣೆಗೆ ಸೀಮಿತವಾಗದೆ, ಮಕ್ಕಳ ಭವಿಷ್ಯ ರೂಪಿಸುವ ಸಾಮಾಜಿಕ ಜವಾಬ್ದಾರಿಯೂ ಆಗಿದೆ ಎಂಬುದನ್ನು ತಮ್ಮ ಕಾರ್ಯದ ಮೂಲಕ ಸಾಬೀತುಪಡಿಸಿರುವ ಅಪರೂಪದ ಸಂಪನ್ಮೂಲ ವ್ಯಕ್ತಿ ಎಂ.ಎಚ್. ಸವದತ್ತಿ ಅವರು ಸಾವಿರಾರು ವಿದ್ಯಾರ್ಥಿಗಳ ಬಾಳಿಗೆ ಬೆಳಕಾಗಿದ್ದಾರೆ.

ಮೂಲತಃ ಮುಂಡರಗಿ ತಾಲೂಕಿನ ಯಕ್ಲಾಸಪೂರ ಗ್ರಾಮದ ಸರ್ಕಾರಿ ಶಾಲೆಯಲ್ಲಿ ವಿಜ್ಞಾನ ಶಿಕ್ಷಕರಾಗಿ ಸೇವೆ ಆರಂಭಿಸಿದ ಸವದತ್ತಿ ಅವರು ಮಕ್ಕಳಿಗೆ ಕೇವಲ ಪಠ್ಯ ಶಿಕ್ಷಣ ನೀಡದೆ, ಅವರಲ್ಲಿರುವ ಆಸಕ್ತಿ ಮತ್ತು ಪ್ರತಿಭೆಯನ್ನು ಗುರುತಿಸಿ ಸೂಕ್ತ ಮಾರ್ಗದರ್ಶನ ನೀಡಿದರು. ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳು ವಿಜ್ಞಾನ ಪ್ರದರ್ಶನಗಳಲ್ಲಿ ಪಾಲ್ಗೊಳ್ಳಲು ತಮ್ಮ ಸ್ವಂತ ಹಣವನ್ನು ವ್ಯಯಿಸಿ ಪ್ರೋತ್ಸಾಹ ನೀಡಿದ್ದು ಅವರ ಶಿಕ್ಷಣ ಪ್ರೀತಿಗೆ ಸಾಕ್ಷಿಯಾಗಿದೆ.

ಶಾಲೆಯಲ್ಲಿ ಮಾದರಿ ವಿಜ್ಞಾನ ಪ್ರಯೋಗಾಲಯ ನಿರ್ಮಿಸಿ, ವಿದ್ಯಾರ್ಥಿಗಳಲ್ಲಿ ವಿಜ್ಞಾನ ವಿಷಯದ ಬಗ್ಗೆ ಆಸಕ್ತಿ ಮೂಡಿಸಿದರು. ಇದರ ಫಲವಾಗಿ ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಪ್ರಶಸ್ತಿಗಳನ್ನು ಪಡೆದು ಗದಗ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ನಂತರ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ತಾಂತ್ರಿಕ ಸಹಾಯಕರಾಗಿ ಪದೋನ್ನತಿ ಪಡೆದರೂ ತಮ್ಮ ಜ್ಞಾನವನ್ನು ಕಚೇರಿ ಕೆಲಸಕ್ಕೆ ಮಾತ್ರ ಸೀಮಿತಗೊಳಿಸಲಿಲ್ಲ. ಪ್ರತಿ ತಿಂಗಳ ಎರಡನೇ ಮತ್ತು ನಾಲ್ಕನೇ ಶನಿವಾರ, ಭಾನುವಾರ ಹಾಗೂ ಸರ್ಕಾರಿ ರಜೆ ದಿನಗಳಲ್ಲಿಯೂ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗಾಗಿ



ವಿಜ್ಞಾನ ಕಾರ್ಯಾಗಾರಗಳನ್ನು ನಡೆಸುತ್ತಾ ಸಂಪನ್ಮೂಲ ವ್ಯಕ್ತಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ವಿಜ್ಞಾನ ವಿಷಯದ ಪ್ರಯೋಗಗಳು, ಚಿತ್ರಗಳು ಹಾಗೂ ಅವುಗಳ ಭಾಗಗಳನ್ನು ಸುಲಭವಾಗಿ ಅರ್ಥವಾಗುವ ರೀತಿಯಲ್ಲಿ ಬೋಧಿಸುವುದು ಅವರ ವಿಶೇಷತೆ. ವಿದ್ಯಾರ್ಥಿಗಳಲ್ಲಿರುವ ವಿಜ್ಞಾನ ವಿಷಯದ ಭಯ ನಿವಾರಿಸಿ, ಪರೀಕ್ಷಾ ತಂತ್ರಗಳು, ಉತ್ತರ ಬರವಣಿಗೆ ಕೌಶಲ್ಯ ಹಾಗೂ ಆತ್ಮವಿಶ್ವಾಸ ಬೆಳೆಸುವ ಮೂಲಕ ಉತ್ತಮ ಫಲಿತಾಂಶಕ್ಕೆ ಮಾರ್ಗದರ್ಶನ ನೀಡುತ್ತಿದ್ದಾರೆ.

ಆನ್‌ಲೈನ್‌ನಲ್ಲಿ ನಡೆದ 'ಪರೀಕ್ಷಾ ಪೇ ಚರ್ಚಾ' ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ಪರೀಕ್ಷೆಗೆ ಹೇಗೆ ಸಿದ್ಧರಾಗಬೇಕು ಎಂಬ ವಿಷಯದ ಕುರಿತು ಮಂಡಿಸಿದ ಪ್ರಬಂಧವನ್ನು ಮೆಚ್ಚಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಅಭಿನಂದನಾ ಪತ್ರ ರವಾನಿಸಿರುವುದು ವಿಶೇಷ ಸಾಧನೆಯಾಗಿದೆ.

2025–26ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಗುಣಾತ್ಮಕ ಫಲಿತಾಂಶ ಸುಧಾರಣೆಯ ಉದ್ದೇಶದಿಂದ ಸವದತ್ತಿ ಅವರು 37 ಕಾರ್ಯಾಗಾರಗಳನ್ನು ನಡೆಸಿದ್ದಾರೆ. ಈ ಕಾರ್ಯಾಗಾರಗಳಲ್ಲಿ 85 ಶಿಕ್ಷಕರಿಗೆ ತರಬೇತಿ ನೀಡಲಾಗಿದ್ದು, 4,049 ವಿದ್ಯಾರ್ಥಿಗಳು ನೇರ ಪ್ರಯೋಜನ ಪಡೆದಿದ್ದಾರೆ.

ವಿಜಯನಗರ, ಉತ್ತರ ಕನ್ನಡ, ಹುಬ್ಬಳ್ಳಿ ಸೇರಿದಂತೆ ಗದಗ ಜಿಲ್ಲೆಯ ವಿವಿಧ ತಾಲೂಕುಗಳು ಹಾಗೂ ಶಾಲೆ–ಕಾಲೇಜುಗಳಲ್ಲಿ ವಿಜ್ಞಾನ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಚಿಂತನೆ ಬೆಳೆಸಿದ್ದಾರೆ.

ಕಾರ್ಯಾಗಾರಗಳಲ್ಲಿ ವಿಜ್ಞಾನ ಪಠ್ಯಕ್ರಮದ ರೂಪರೇಖೆ, ಅಂಕ ಹಂಚಿಕೆ, ಚಟುವಟಿಕೆ ಆಧಾರಿತ ಕಲಿಕೆ, ಪ್ರಯೋಗಗಳು, ಮಾದರಿ ಪ್ರಶ್ನೆಪತ್ರಿಕೆಗಳ ವಿಶ್ಲೇಷಣೆ, ವೈಜ್ಞಾನಿಕ ಚಿತ್ರಗಳ ಅಭ್ಯಾಸ ಹಾಗೂ ಉತ್ತರ ಬರೆಯುವ ವಿಧಾನಗಳ ಕುರಿತು ತರಬೇತಿ ನೀಡಲಾಗುತ್ತದೆ. ನಿಧಾನ ಕಲಿಕೆಯ ವಿದ್ಯಾರ್ಥಿಗಳಿಗೆ ಉತ್ತೀರ್ಣತೆ ಸಾಧಿಸಲು ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ 40+ ಹಾಗೂ 50+ ಅಂಕ ಗಳಿಸಲು ವಿಶೇಷ ಮಾರ್ಗದರ್ಶನ ನೀಡಲಾಗುತ್ತಿದೆ.

ತಮ್ಮ ವಿಶ್ರಾಂತಿ ಮತ್ತು ರಜೆ ದಿನಗಳನ್ನೂ ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಮೀಸಲಿಟ್ಟು ಜ್ಞಾನ ಹಂಚುತ್ತಿರುವ ಎಂ.ಎಚ್. ಸವದತ್ತಿ ಅವರ ಸೇವೆ ನಿಜಕ್ಕೂ ಶಿಕ್ಷಕ ಸಮುದಾಯಕ್ಕೆ ಮಾದರಿಯಾಗಿದೆ. ಕಚೇರಿಯ ಕರ್ತವ್ಯದೊಂದಿಗೆ ಸಾವಿರಾರು ವಿದ್ಯಾರ್ಥಿಗಳ ಬದುಕಿನಲ್ಲಿ ಆತ್ಮವಿಶ್ವಾಸದ ಬೆಳಕು ಹಚ್ಚುತ್ತಿರುವ ಅವರು, ಶಿಕ್ಷಕ ವೃತ್ತಿಯ ನಿಜವಾದ ಅರ್ಥವನ್ನು ತಮ್ಮ ಕಾರ್ಯದ ಮೂಲಕ ಸಾರುತ್ತಿದ್ದಾರೆ.

**–ವೆಂಕಟೇಶ ಬಿ. ಇಮರಾಪೂರ, ಹಿರಿಯ ಪತ್ರಕರ್ತರು, ಗದಗ**

# ಕೂಡ್ಲಿಗಿ ಸರ್ಕಲ್‌ಗೆ 'ವಾಸವಿ ವೃತ್ತ' ನಾಮಕರಣಕ್ಕೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಅಭಿವೃದ್ಧಿಗೆ 1953ರಿಂದಲೂ ಆರ್ಯವೈಶ್ಯ ಸಮಾಜ ಅಪಾರ ಕೊಡುಗೆ ನೀಡುತ್ತಾ ಬಂದಿದ್ದು, ಈ ಹಿನ್ನೆಲೆಯಲ್ಲಿ ಪಟ್ಟಣದ ಕೂಡ್ಲಿಗಿ ಸರ್ಕಲ್‌ಗೆ 'ವಾಸವಿ ವೃತ್ತ' ಎಂದು ನಾಮಕರಣ ಮಾಡಬೇಕು ಎಂದು ಆರ್ಯವೈಶ್ಯ ಸಂಘದ ಅಧ್ಯಕ್ಷ ಕೆ. ರಾಘವೇಂದ್ರ ಆಗ್ರಹಿಸಿದರು.

ಆರ್ಯವೈಶ್ಯ ಸಮಾಜದ ಮುಖಂಡರು ಹಾಗೂ ಸದಸ್ಯರೊಂದಿಗೆ ಶಾಸಕರನ್ನು ಭೇಟಿ ಮಾಡಿ ಈ ಕುರಿತು ಮನವಿ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಹಗರಿಬೊಮ್ಮನಹಳ್ಳಿ ಪಟ್ಟಣದ ಸರ್ಕಾರಿ ಆಸ್ಪತ್ರೆ, ಬಂಡಿಹಳ್ಳಿ ಗುಡ್ಡದ ತಿಮ್ಮಪ್ಪನ ತೇರು ಹಾಗೂ ದೇವಸ್ಥಾನ, ಪುರಸಭೆಯ ಉದ್ಯಾನವನ, ಪ್ರೌಢಶಾಲೆ, ಪಿಯು ಕಾಲೇಜು, ಪದವಿ ಕಾಲೇಜು ಹಾಗೂ ಕುಡಿಯುವ ನೀರಿನ ಯೋಜನೆ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಗಳಿಗೆ ಆರ್ಯವೈಶ್ಯ ಸಮಾಜ ಸ್ಥಳದಾನ ಹಾಗೂ ವಿವಿಧ ರೀತಿಯ ಕೊಡುಗೆಗಳನ್ನು ನೀಡಿದೆ ಎಂದು ತಿಳಿಸಿದರು.

ಮನವಿ ಸ್ವೀಕರಿಸಿದ ಶಾಸಕ ನೇಮಿರಾಜ್ ನಾಯಕ್ ಮಾತನಾಡಿ, ಆರ್ಯವೈಶ್ಯ ಕೊಡುಗೆ ಶ್ಲಾಘನೀಯವಾಗಿದೆ. ಸಮಾಜದ ಮನವಿಗೆ ಸ್ಪಂದಿಸಿ ಶೀಘ್ರದಲ್ಲಿಯೇ ಕೂಡ್ಲಿಗಿ ವೃತ್ತಕ್ಕೆ 'ವಾಸವಿ ವೃತ್ತ' ಎಂದು ನಾಮಕರಣ ಮಾಡಿ, ಅಗತ್ಯ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭಾದ ರಾಜ್ಯಾಧ್ಯಕ್ಷ ಭರತ್ ಗಂಗಾವತಿ, ಆರ್ಯವೈಶ್ಯ ಸಂಘ ಟ್ರಸ್ಟ್ ಅಧ್ಯಕ್ಷ ಕೆ. ರಾಘವೇಂದ್ರ, ಮಂಜುನಾಥ ಶ್ರೇಷ್ಠಿ, ಸುದರ್ಶನ ಶ್ರೇಷ್ಠಿ, ಲಕ್ಷ್ಮೀಪತಿ, ಬೆಲ್ಲಂಕೊಂಡಿ ರಮೇಶ್, ಗೋಪಾಲ, ವೆಂಕಟಾಚಲಪತಿ ವೇಣುಗೋಪಾಲ, ಕುಮಾರ್ ಇಂಜಿನಿಯರ್, ಪ್ರಭಾಕರ ಶ್ರೇಷ್ಠಿ, ಬೇಳೂರು ಮಾರುತಿ ಶ್ರೇಷ್ಠಿ, ಕುಪ್ಪಾ ಶಿವಕುಮಾರ, ಕುಪ್ಪಾ ಲಕ್ಷ್ಮೀಪತಿ, ಬಾಲಾಜಿ, ಪ್ರವೀಣ್, ಪ್ರಕಾಶ್, ಬಸಾಪುರ ರಾಘವೇಂದ್ರ, ಹನುಮಂತ ಶ್ರೇಷ್ಠಿ, ನಾನ್ಯಾಪೂರ ಕೃಷ್ಣಮೂರ್ತಿ, ರಾಜೇಂದ್ರ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

### ಸಂಕ್ಷಿಪ್ತ ಸುದ್ದಿಗಳು

## ಕ್ರೀಡೆ ಮನುಷ್ಯನ ಅವಿಭಾಜ್ಯ ಅಂಗ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಕ್ರೀಡೆಯು ಮನುಷ್ಯನ ಜೀವನದ ಅವಿಭಾಜ್ಯ ಅಂಗವಾಗಿದ್ದು, ದೈಹಿಕ ಹಾಗೂ ಮಾನಸಿಕ ಸದೃಢತೆಯೊಂದಿಗೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಕ್ರೀಡೆ ಸಹಕಾರಿಯಾಗಿದೆ ಎಂದು ಎಸ್.ಎಂ. ನೀಲಗುಂದ ಹೇಳಿದರು.

ಪಟ್ಟಣದಲ್ಲಿ ಆಯೋಜಿಸಿದ್ದ ಪ್ರಾಥಮಿಕ ಕ್ಲಸ್ಟರ್ ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಹಿಂದಿನ ದಿನಗಳಲ್ಲಿ ಕ್ರೀಡೆಯಲ್ಲಿ ಭಾಗವಹಿಸಲು ಸಾಕಷ್ಟು ಅಡೆತಡೆಗಳಿದ್ದರೂ, ಅವುಗಳನ್ನು ಮೆಟ್ಟಿನಿಂತು ಅನೇಕ ಕ್ರೀಡಾಪಟುಗಳು ಸಾಧನೆ ಮಾಡಿ ತಮ್ಮ ಬದುಕನ್ನು ರೂಪಿಸಿಕೊಂಡಿದ್ದಾರೆ. ಆದರೆ ಪ್ರಸ್ತುತ ಸರ್ಕಾರ ಹಾಗೂ ಪಾಲಕ–ಪೋಷಕರಿಂದ ಕ್ರೀಡೆಗೆ ಸಾಕಷ್ಟು ಸಹಕಾರ ದೊರೆಯುತ್ತಿರುವುದರಿಂದ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಕೂಟಗಳಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ಕ್ರೀಡೆಯಲ್ಲಿ ಸೋಲು–ಗೆಲುವು ಮುಖ್ಯವಲ್ಲ, ಭಾಗವಹಿಸುವಿಕೆಯೇ ಮುಖ್ಯ. ಕ್ರೀಡೆಯಿಂದ ಮಕ್ಕಳಲ್ಲಿ ಆತ್ಮವಿಶ್ವಾಸ ಬೆಳೆಯುವುದರ ಜತೆಗೆ ಮಾನಸಿಕ ಹಾಗೂ ದೈಹಿಕ ಸದೃಢತೆ ವೃದ್ಧಿಯಾಗುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಕ್ರೀಡೆಗೂ ಆದ್ಯತೆ ನೀಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಂ.ಡಿ. ಬಟ್ಟೂರ, ಬಸವರಾಜ ಭಾತಾಖಾನಿ, ಪಿ.ಎ. ವಂಟಕರ, ಸಂಜಯ ನೀಲಗುಂದ, ಶಿವಬಸವ ಹಸಬಿ, ಹೊನ್ನಪ್ಪ ನೀಲಗುಂದ, ಡಾ. ಎಸ್.ಸಿ. ಚವಡಿ, ವಿಜಯ ನೀಲಗುಂದ, ಮಹಾಂತೇಶ ಕೋರಿ ಸೇರಿದಂತೆ ದೈಹಿಕ ಶಿಕ್ಷಕರು ಹಾಗೂ ಶಿಕ್ಷಕ ವೃಂದ ಉಪಸ್ಥಿತರಿದ್ದರು

## ಸೆ. 7, 8ರಂದು ವರವೀರಭದ್ರೇಶ್ವರ ಜಾತ್ರೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಕುರುಡಗಿ ಗ್ರಾಮದ ಆರಾಧ್ಯ ದೈವ ಶ್ರೀ ವರವೀರಭದ್ರೇಶ್ವರ ದೇವರ ಜಾತ್ರಾ ಮಹೋತ್ಸವವು ಸೆಪ್ಟೆಂಬರ್ 7 ಮತ್ತು 8ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ವಿಜೃಂಭಣೆಯಿಂದ ಜರುಗಲಿದೆ.



ಜಾತ್ರಾ ಮಹೋತ್ಸವದ ಅಂಗವಾಗಿ ನಿತ್ಯ ಶ್ರೀ ವರವೀರಭದ್ರೇಶ್ವರ ದೇವರಿಗೆ ವೇದಮೂರ್ತಿ ಪಂಚಾಕ್ಷರಯ್ಯ ವೀರಾತಯ್ಯ ಹಿರೇಮಠ ಅವರಿಂದ ರುದ್ರಾಭಿಷೇಕ ನೆರವೇರಲಿದೆ.

ಸೆಪ್ಟೆಂಬರ್ 7ರಂದು ಬೆಳಿಗ್ಗೆ 7.45ಕ್ಕೆ ಕಳಸಾರೋಹಣ ನಡೆಯಲಿದೆ. ಇದೇ ಸಂದರ್ಭದಲ್ಲಿ ಗದಗಿನ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರ ಪಾದಪೂಜೆ ನೆರವೇರಲಿದೆ. ಸಂಜೆ 5 ಗಂಟೆಗೆ ಮಮತಾ, ವಕೀಲ ಸಿದ್ದಲಿಂಗಪ್ಪ ಕರಬಸಪ್ಪ ಸವಡಿ ಹಾಗೂ ಧಾರವಾಡದ ಕು. ಸೃಷ್ಟಿ, ಕು. ಶ್ರೇಯಾ ಮತ್ತು ಕುಟುಂಬದವರಿಂದ ಜಾತ್ರಾ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಸೆಪ್ಟೆಂಬರ್ 8ರಂದು ಬೆಳಿಗ್ಗೆ 9 ಗಂಟೆಗೆ ಗಂಗಾಪೂಜೆ, ಬೆಳಿಗ್ಗೆ 10 ಗಂಟೆಗೆ ಶ್ರೀ ವರವೀರಭದ್ರೇಶ್ವರ ಪುರವಂತರು ಹಾಗೂ ಸಂಗಡಿಗರಿಂದ ಅಗ್ನಿ ಪ್ರವೇಶ ಕಾರ್ಯಕ್ರಮ ಜರುಗಲಿದೆ. ಬಳಿಕ ಭಕ್ತರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ.

ಸಂಜೆ 7 ಗಂಟೆಗೆ ಸಂಪ್ರದಾಯಬದ್ಧ ಕಡುಬಿನ ಕಾಳಗ ನಡೆಯಲಿದೆ.

ಜಾತ್ರಾ ಮಹೋತ್ಸವಕ್ಕೆ ಸುತ್ತಮುತ್ತಲಿನ ಗ್ರಾಮಗಳ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀ ವರವೀರಭದ್ರೇಶ್ವರ ದೇವರ ದರ್ಶನ ಪಡೆದು, ತಮ್ಮ ತನು ಮನ ಧನ ಸೇವೆ ಸಲ್ಲಿಸಿ ದೇವರ ಕೃಪೆಗೆ ಪಾತ್ರರಾಗಬೇಕೆಂದು ಕುರುಡಗಿ ಗ್ರಾಮದ ಸದ್ಭಕ್ತ ಮಂಡಳಿ ಪ್ರಕಟಣೆಯಲ್ಲಿ ಕೋರಿದೆ.

### ಸಾಂಕ್ರಾಮಿಕ ರೋಗ ತಡೆಗೆ ಸಮನ್ವಯದ ಕಾರ್ಯಕ್ಕೆ ಜಿಲ್ಲಾಧಿಕಾರಿ ಸೂಚನೆ

# ಏಳು ತಿಂಗಳಲ್ಲೇ 5,805 ನಾಯಿ ಕಡಿತ ಪ್ರಕರಣ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಈ ವರ್ಷದ ಜನವರಿಯಿಂದ ಜುಲೈವರೆಗೆ ಬರೋಬ್ಬರಿ 5,805 ನಾಯಿ ಕಡಿತ ಹಾಗೂ 213 ಹಾವು ಕಡಿತ ಪ್ರಕರಣಗಳು ವರದಿಯಾಗಿದ್ದು, ಸಾಂಕ್ರಾಮಿಕ ಮತ್ತು ಪ್ರಾಣಿಜನ್ಯ ರೋಗಗಳ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಸೇರಿದಂತೆ ಎಲ್ಲ ಸಂಬಂಧಪಟ್ಟ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 2ರಂದು ನಡೆದ ಜಿಲ್ಲಾ ಮಟ್ಟದ ಕಣ್ಗಾವಲು ಸಮಿತಿ ಸಭೆಯಲ್ಲಿ ನೀರಿನಿಂದ ಹರಡುವ, ಲಸಿಕೆಯಿಂದ ತಡೆಯಬಹುದಾದ ಹಾಗೂ ಪ್ರಾಣಿಜನ್ಯ ರೋಗಗಳೊಂದಿಗೆ ಹಾವು ಕಡಿತ ಮತ್ತು ರೇಬೀಸ್ ಮರಣ ಪ್ರಕರಣಗಳ ಕುರಿತು ಸಮಗ್ರ ಪರಿಶೀಲನೆ ನಡೆಸಲಾಯಿತು.

ಜನವರಿಯಿಂದ ಜುಲೈವರೆಗೆ ಜಿಲ್ಲೆಯಲ್ಲಿ 2,140 ಕರಳುಬೇನೆ, 33 ಡೆಂಗ್ಯೂ, 8 ಚಿಕೂನ್‌ಗುನ್ಯಾ, 5 ಮಲೇರಿಯಾ, 10 ಆನೆಕಾಲು ರೋಗ ಹಾಗೂ 10 ಇನ್‌ಫ್ಲೂಯೆಂಜಾ ಪ್ರಕರಣಗಳು ದಾಖಲಾಗಿವೆ. ಇದೇ ಅವಧಿಯಲ್ಲಿ 1,319 ಇತರೆ ಪ್ರಾಣಿ ಕಡಿತ ಪ್ರಕರಣಗಳೂ ವರದಿಯಾಗಿದ್ದು, ಎರಡು ಸಂಶಯಾಸ್ಪದ ರೇಬೀಸ್ ಮರಣ ಹಾಗೂ ಮೂರು ಹಾವು ಕಡಿತ ಮರಣ ಪ್ರಕರಣಗಳು ದಾಖಲಾಗಿವೆ.



ನೀರು ಶುದ್ಧೀಕರಣ, ಪರಿಸರ ಸ್ವಚ್ಛತೆ ಹಾಗೂ ಸೊಳ್ಳೆ ನಿಯಂತ್ರಣಕ್ಕೆ ಆದ್ಯತೆ ನೀಡುವಂತೆ ಸೂಚಿಸಲಾಯಿತು. ಸಾರ್ವಜನಿಕರು ಶುದ್ಧ ಕುಡಿಯುವ ನೀರು ಬಳಸುವುದು, ಮನೆ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು ಹಾಗೂ ಜ್ವರ ಕಾಣಿಸಿಕೊಂಡ ತಕ್ಷಣ ಆರೋಗ್ಯ ಕೇಂದ್ರದಲ್ಲಿ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದು ತಿಳಿಸಲಾಯಿತು.

ನಾಯಿ ಅಥವಾ ಇತರೆ ಪ್ರಾಣಿ ಕಚ್ಚಿದರೆ ಗಾಯವನ್ನು ಸಾಬೂನಿನಿಂದ ಹರಿಯುವ ನೀರಿನಲ್ಲಿ ಕನಿಷ್ಠ 15 ನಿಮಿಷ ತೊಳೆದು ತಕ್ಷಣ ಆಸ್ಪತ್ರೆಗೆ ತೆರಳಬೇಕು. ಹಾವು ಕಚ್ಚಿದ ಸಂದರ್ಭದಲ್ಲಿ ನಾಟಿ ಅಥವಾ ಮಾಂತ್ರಿಕ ಚಿಕಿತ್ಸೆಗೆ ಮೊರೆ ಹೋಗದೆ ಗಾಯಾಳುವನ್ನು ಕೂಡಲೇ ಆಸ್ಪತ್ರೆಗೆ ಕರೆದೊಯ್ಯಬೇಕು ಎಂದು ಆರೋಗ್ಯ ಇಲಾಖೆ ಮನವಿ ಮಾಡಿದೆ.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡರ, ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಹುಲಗಣ್ಣವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಸಾಂಕ್ರಾಮಿಕ ರೋಗಗಳ ತಡೆಗೆ ಎಲ್ಲ ಇಲಾಖೆಗಳು ಒಟ್ಟಾಗಿ ಕಾರ್ಯನಿರ್ವಹಿಸಬೇಕು. ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಅಗತ್ಯ ಔಷಧಿಗಳು, ಹಾವು ಕಡಿತಕ್ಕೆ ಸ್ನೇಕ್ ವೆನಮ್ ಹಾಗೂ ಪ್ರಾಣಿ ಕಡಿತಕ್ಕೆ ರೇಬೀಸ್ ಲಸಿಕೆ ಮತ್ತು ಇಮ್ಯುನೊಗ್ಲೋಬ್ಯುಲಿನ್ ಸಮರ್ಪಕವಾಗಿ ಲಭ್ಯವಿರುವಂತೆ ನೋಡಿಕೊಳ್ಳಬೇಕು.
>
> **- ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿಗಳು**

# ಜಿಲ್ಲಾ ಕ್ರೀಡಾಂಗಣದಲ್ಲಿ ಟರ್ಫ್ ಬೇಡ; ಗ್ರಾಸ್ ಫುಟ್‌ಬಾಲ್ ಮೈದಾನ ನಿರ್ಮಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ಅವಳಿ ನಗರದ ಏಕೈಕ ಜಿಲ್ಲಾ ಕ್ರೀಡಾಂಗಣದಲ್ಲಿ ತರಾತುರಿಯಲ್ಲಿ ಸಿಂಥೆಟಿಕ್ ಫುಟ್‌ಬಾಲ್ ಟರ್ಫ್ ಮೈದಾನ ನಿರ್ಮಿಸುತ್ತಿರುವ ಕಾಮಗಾರಿಯನ್ನು ತಕ್ಷಣ ಸ್ಥಗಿತಗೊಳಿಸಿ, ಅದರ ಬದಲಿಗೆ ಹುಲ್ಲಿನ ಹಾಸಿನ (ಗ್ರಾಸ್) ಫುಟ್‌ಬಾಲ್ ಮೈದಾನ ನಿರ್ಮಿಸಬೇಕು ಎಂದು ಶಿವರಾಮಕೃಷ್ಣ ಸೇವಾ ಟ್ರಸ್ಟ್ ನೇತೃತ್ವದಲ್ಲಿ ಕ್ರೀಡಾ ಸಂಘಟನೆಗಳ ಮುಖಂಡರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಿವರಾಮಕೃಷ್ಣ ಸೇವಾ ಟ್ರಸ್ಟ್ ಅಧ್ಯಕ್ಷ ರಾಜೂ ಖಾನಪ್ಪನವರ, ಜಿಲ್ಲಾ ಕ್ರೀಡಾಂಗಣದಲ್ಲಿ ಪ್ರತಿವರ್ಷ ದಸರಾ ಕ್ರೀಡಾಕೂಟ, ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ, ಶಾಲಾ–ಕಾಲೇಜುಗಳ ರಾಜ್ಯ ಹಾಗೂ ರಾಷ್ಟ್ರಮಟ್ಟದ ಕ್ರೀಡಾಕೂಟಗಳು ನಡೆಯುತ್ತವೆ. ಅಲ್ಲದೆ, ಆಗಸ್ಟ್ 15, ಗಣರಾಜ್ಯೋತ್ಸವ ಹಾಗೂ ಕನ್ನಡ ರಾಜ್ಯೋತ್ಸವದಂತಹ ರಾಷ್ಟ್ರೀಯ ಮತ್ತು ನಾಡಹಬ್ಬಗಳ ಕಾರ್ಯಕ್ರಮಗಳಿಗೂ ಇದೇ ಕ್ರೀಡಾಂಗಣ ಬಳಕೆಯಾಗುತ್ತಿದೆ ಎಂದು ತಿಳಿಸಿದರು.

ಇಂತಹ ಬಹುಉದ್ದೇಶದ ಕ್ರೀಡಾಂಗಣದಲ್ಲಿ ಸಿಂಥೆಟಿಕ್ ಫುಟ್‌ಬಾಲ್ ಟರ್ಫ್ ನಿರ್ಮಿಸಿದರೆ ಉಳಿದ ಕ್ರೀಡೆಗಳಿಗೆ ತೀವ್ರ ಅನಾನುಕೂಲವಾಗಲಿದೆ ಎಂದು ಕ್ರೀಡಾಪಟುಗಳು ಆತಂಕ ವ್ಯಕ್ತಪಡಿಸಿದ್ದಾರೆ. ವಿಶೇಷವಾಗಿ ಶಾಟ್‌ಪುಟ್, ಜಾವೆಲಿನ್ ಥ್ರೋ, ಡಿಸ್ಕಸ್ ಥ್ರೋ ಹಾಗೂ ಹ್ಯಾಮರ್ ಥ್ರೋ ಸ್ಪರ್ಧೆಗಳನ್ನು ನಡೆಸಲು ಸಾಧ್ಯವಾಗುವುದಿಲ್ಲ. ಇದರಿಂದ ಕ್ರೀಡಾಪಟುಗಳು ಶಾಲಾ–ಕಾಲೇಜುಗಳ ಮೈದಾನಗಳನ್ನು ಅವಲಂಬಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು ಅವರು ಹೇಳಿದರು.



ಫುಟ್‌ಬಾಲ್ ಕ್ರೀಡೆಯ ಅಭಿವೃದ್ಧಿಗೆ ನಮ್ಮ ವಿರೋಧವಿಲ್ಲ. ಆದರೆ ಒಂದೇ ಕ್ರೀಡೆಗಾಗಿ ಜಿಲ್ಲೆಯ ವಿವಿಧ ಕ್ರೀಡೆಗಳಿಗೆ ಲಭ್ಯವಿರುವ ಏಕೈಕ ಕ್ರೀಡಾಂಗಣದ ಸ್ವರೂಪವನ್ನು ಬದಲಿಸುವುದು ವೈಜ್ಞಾನಿಕ ಕ್ರಮವಲ್ಲ. ಟರ್ಫ್ ಬದಲಿಗೆ ಹುಲ್ಲಿನ ಹಾಸಿನ ಗ್ರಾಸ್ ಫುಟ್‌ಬಾಲ್ ಮೈದಾನ ನಿರ್ಮಿಸಿದರೆ ಫುಟ್‌ಬಾಲ್ ಸೇರಿದಂತೆ ಇತರ ಕ್ರೀಡೆಗಳಿಗೂ ಅವಕಾಶ ಉಳಿಯಲಿದೆ ಎಂದು ರಾಜೂ ಖಾನಪ್ಪನವರ ಪ್ರತಿಪಾದಿಸಿದರು.

ಕ್ರೀಡಾಂಗಣ ನಿರ್ಮಾಣದ ಕುರಿತು ವಿವಿಧ ಕ್ರೀಡಾ ಸಂಘಟನೆಗಳು ಹಾಗೂ ಕ್ರೀಡಾಪಟುಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಕಾಮಗಾರಿ ಆರಂಭಿಸಿರುವುದು ಖಂಡನೀಯ. ಕ್ರೀಡಾ ಕ್ಷೇತ್ರದ ತಜ್ಞರು ಹಾಗೂ ಎಲ್ಲ ಕ್ರೀಡಾ ಸಂಘಟನೆಗಳೊಂದಿಗೆ ಸಮಾಲೋಚನೆ ನಡೆಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಈಗಾಗಲೇ ಆರಂಭಿಸಿರುವ ಟರ್ಫ್ ಫುಟ್‌ಬಾಲ್ ಮೈದಾನದ ಕಾಮಗಾರಿಯನ್ನು ಕೂಡಲೇ ಸ್ಥಗಿತಗೊಳಿಸಬೇಕು. ಏಳು ದಿನಗಳೊಳಗೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ, ಸರದಿ ಉಪವಾಸ ಸತ್ಯಾಗ್ರಹ, ರಸ್ತೆ ತಡೆ ಹಾಗೂ ಅಮರಣ ಉಪವಾಸ ಸೇರಿದಂತೆ ವಿವಿಧ ರೀತಿಯ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡರ, ಅರವಿಂದ ಹುಲ್ಲೂರ, ರವಿಕಾಂತ ಅಂಗಡಿ, ಪ್ರಭುಗೌಡ ಪಾಟೀಲ, ವೀರೇಶ ರೋಣದ, ನಾಗರಾಜ ಬಂಡಿವಡ್ಡರ, ಮಹಾಂತೇಶ ಪಾಟೀಲ, ರಾಜೂ ಉಮಚಗಿ, ಪರಮೇಶ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಪೂಜೆ, ಧ್ಯಾನ-ಧರ್ಮಕಾರ್ಯಗಳಿಂದ ಬದುಕಿಗೆ ನಿಜವಾದ ಸಾರ್ಥಕತೆ

## ಹೊರಗಿನ ಸಂಪತ್ತಿಗಿಂತ ಅಂತರಂಗದ ನೆಮ್ಮದಿ ಶ್ರೇಷ್ಠ!

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಹಿರಂಗದ ಸಂಪತ್ತನ್ನು ಗಳಿಸಿಕೊಳ್ಳಲು ಬದುಕಿನಲ್ಲಿ ಹಲವಾರು ದಾರಿಗಳಿವೆ. ಆದರೆ ಮನುಷ್ಯನ ಅಂತರಂಗದಲ್ಲಿ ಶಾಂತಿ, ಸಮಾಧಾನ ಹಾಗೂ ನೆಮ್ಮದಿ ನೆಲೆಸುವುದೇ ನಿಜವಾದ ಸಂಪತ್ತು. ಅದಕ್ಕಾಗಿ ಪ್ರತಿಯೊಬ್ಬರೂ ಪೂಜೆ, ಧ್ಯಾನ, ಪ್ರಾರ್ಥನೆ, ದಾನ ಹಾಗೂ ಧರ್ಮಕಾರ್ಯಗಳನ್ನು ಜೀವನದ ಅವಿಭಾಜ್ಯ ಅಂಗವನ್ನಾಗಿ ರೂಢಿಸಿಕೊಳ್ಳಬೇಕು ಎಂದು ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.



ಶ್ರಾವಣ ಮಾಸದ ನಿಮಿತ್ತ ಬುಧವಾರ ಲಕ್ಷ್ಮೇಶ್ವರದಲ್ಲಿ ಹುಲಗೇರಿ ಬಣದ ಭಕ್ತಗಣ ಆಯೋಜಿಸಿದ್ದ ಇಷ್ಟಲಿಂಗ ಪೂಜಾ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಇಂದಿನ ಒತ್ತಡದ ಬದುಕಿನಲ್ಲಿ ಮನುಷ್ಯ ಭೌತಿಕ ಸಂಪತ್ತು, ಉದ್ಯೋಗ ಹಾಗೂ ವಿವಿಧ ಚಟುವಟಿಕೆಗಳ ಹಿಂದೆ ಓಡುತ್ತ ಅಂತರಂಗದ ನೆಮ್ಮದಿಯನ್ನು ಕಳೆದುಕೊಳ್ಳುತ್ತಿದ್ದಾನೆ. ನಿತ್ಯದ ಕೆಲಸದ ಒತ್ತಡ, ಜಂಜಾಟ ಹಾಗೂ ಸ್ಪರ್ಧಾತ್ಮಕ ಜೀವನದ ನಡುವೆಯೂ ಧಾರ್ಮಿಕ ಕಾರ್ಯಗಳಿಗೆ ಸಮಯ ಮೀಸಲಿಡುವುದು ಅತ್ಯಂತ ಅಗತ್ಯವಾಗಿದೆ ಎಂದರು.

ಶ್ರಾವಣ ಮಾಸವು ಭಕ್ತಿ, ಧ್ಯಾನ, ಆತ್ಮಚಿಂತನೆ ಹಾಗೂ ಧಾರ್ಮಿಕ ಆಚರಣೆಗಳಿಗೆ ವಿಶೇಷ ಮಹತ್ವ ಹೊಂದಿದೆ. ಇವುಗಳ ಮೂಲಕ ಮನಸ್ಸಿನಲ್ಲಿ ಹೊಸ ಚೈತನ್ಯ ಮೂಡುತ್ತದೆ. ಭಕ್ತಿಯಿಂದ ಲಿಂಗಪೂಜೆ, ಜಪ, ಧ್ಯಾನ ಹಾಗೂ ಪ್ರಾರ್ಥನೆ ಮಾಡುವುದರಿಂದ ಮನಸ್ಸಿನ ಚಂಚಲತೆ ದೂರವಾಗಿ ಆತ್ಮಸ್ಥೈರ್ಯ ಹೆಚ್ಚುತ್ತದೆ. ಬದುಕಿನಲ್ಲಿ ಎದುರಾಗುವ ಕಷ್ಟ–ಸಂಕಷ್ಟಗಳನ್ನು ಸಮಚಿತ್ತದಿಂದ ಎದುರಿಸುವ ಶಕ್ತಿಯೂ ದೊರೆಯುತ್ತದೆ ಎಂದು ಹೇಳಿದರು.

ಇಷ್ಟಲಿಂಗ ಪೂಜೆ ಅಂತರಂಗವನ್ನು ಶುದ್ಧೀಕರಿಸುವ ಸಾಧನವಾಗಿದ್ದು, ಜೀವನದಲ್ಲಿ ಶಿಸ್ತು, ಸದಾಚಾರ, ಸಂಯಮ ಹಾಗೂ ಸಾತ್ವಿಕ ಚಿಂತನೆಯನ್ನು ಬೆಳೆಸುತ್ತದೆ. ಆದ್ದರಿಂದ ಶ್ರಾವಣ ಮಾಸದಲ್ಲಿ ಪ್ರತಿಯೊಬ್ಬರೂ ಸಾಧ್ಯವಾದಷ್ಟು ಧಾರ್ಮಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮಕ್ಕಳಿಗೂ ಧಾರ್ಮಿಕ ಹಾಗೂ ಸಂಸ್ಕಾರದ ಶಿಕ್ಷಣ ನೀಡುವುದು ಇಂದಿನ ಅಗತ್ಯವಾಗಿದೆ. ತಂದೆ–ತಾಯಿಗಳು ತಮ್ಮ ಮಕ್ಕಳನ್ನು ಕೇವಲ ವಿದ್ಯಾಭ್ಯಾಸ ಮತ್ತು ಭೌತಿಕ ಯಶಸ್ಸಿನತ್ತ ಕೊಂಡೊಯ್ಯದೆ, ಪೂಜೆ, ಪ್ರಾರ್ಥನೆ, ದಾನ, ಧರ್ಮ ಹಾಗೂ ಹಿರಿಯರನ್ನು ಗೌರವಿಸುವ ಸಂಸ್ಕಾರವನ್ನೂ ಬೆಳೆಸಬೇಕು. ಉತ್ತಮ ಸಂಸ್ಕಾರ ಹೊಂದಿದ ಮಕ್ಕಳು ಭವಿಷ್ಯದಲ್ಲಿ ಸಮಾಜದ ಆಸ್ತಿಯಾಗುತ್ತಾರೆ ಎಂದು ಶ್ರೀಗಳು ಹೇಳಿದರು.

ಭೌತಿಕ ಜೀವನದಲ್ಲಿ ಎಷ್ಟೇ ಸಂಪತ್ತು ಗಳಿಸಿದರೂ ಮನಸ್ಸಿಗೆ ನೆಮ್ಮದಿ ಇಲ್ಲದಿದ್ದರೆ ಬದುಕು ಅಪೂರ್ಣವಾಗುತ್ತದೆ. ಆದ್ದರಿಂದ ಹೊರಗಿನ ಸಂಪತ್ತಿನೊಂದಿಗೆ ಅಂತರಂಗದ ಸಂಪತ್ತನ್ನೂ ಗಳಿಸಿಕೊಳ್ಳಬೇಕು. ಭಕ್ತಿ, ಧರ್ಮ ಹಾಗೂ ಸತ್ಕಾರ್ಯಗಳ ಮೂಲಕ ಅಂತರಂಗದ ಸಂಪತ್ತನ್ನು ವೃದ್ಧಿಸಿಕೊಂಡಾಗ ಜೀವನ ಸಾರ್ಥಕವಾಗುತ್ತದೆ ಎಂದು ಶ್ರೀ ಚನ್ನವೀರ ಮಹಾಸ್ವಾಮಿಗಳು ಆಶೀರ್ವದಿಸಿದರು.

ಸೋಮೇಶ್ವರ ಭಕ್ತರ ಟ್ರಸ್ಟ್ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ, ಶಂಕರ ಬಾಳಿಕಾಯಿ, ದೇವಣ್ಣ ತೋಟದ, ಎಸ್. ಎಫ್. ಆದಿ, ಬಸವರಾಜ ಮೆಣಸಿನಕಾಯಿ, ವಿರೂಪಾಕ್ಷ ಆದಿ, ಬಸವರಾಜ ಅಣ್ಣಿಗೇರಿ, ಜಿ.ಎಸ್. ಗುಡಗೇರಿ, ಕಾಶಪ್ಪ ಮುಳಗುಂದ, ಮಯೂರಗೌಡ ಪಾಟೀಲ, ಸುರೇಶ ಚೌಕನವರ, ಶಂಕರಪ್ಪ ಆದಿ ಸೇರಿದಂತೆ ಭಕ್ತರು ಶ್ರಾವಣ ಮಾಸದ ಇಷ್ಟಲಿಂಗ ಪೂಜಾ ಕಾರ್ಯಕ್ರಮದಲ್ಲಿ ಶ್ರದ್ಧಾಭಕ್ತಿಯಿಂದ ಪಾಲ್ಗೊಂಡು ಪೂಜೆ ಸಲ್ಲಿಸಿದರು.

### ಕೂಲಿಕಾರರಿಗೆ ಹೊಸ ನಿರೀಕ್ಷೆ ಮೂಡಿಸಿದ ವಿಬಿ-ಜಿ ರಾಮ್ ಜಿ ಯೋಜನೆ; ಸಚಿವ ಲಾಡ್ ಘೋಷಣೆ

# ಗ್ರಾಮದಲ್ಲೇ ಉದ್ಯೋಗದ ಹೊಸ ಕ್ರಾಂತಿ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಉದ್ಯೋಗ ಅರಸಿ ಗ್ರಾಮೀಣ ಜನರು ಗುಳೆ ಹೋಗಬೇಕಾದ ಪರಿಸ್ಥಿತಿಯನ್ನು ತಪ್ಪಿಸುವ ಉದ್ದೇಶದಿಂದ ವಿಬಿ–ಜಿ ರಾಮ್ ಜಿ ಯೋಜನೆಯಡಿ ಮಂಜೂರಾಗಿರುವ ಕಾಮಗಾರಿಗಳನ್ನು ಗ್ರಾಮದಲ್ಲಿಯೇ ಕೈಗೆತ್ತಿಕೊಂಡು ಸ್ಥಳೀಯ ನಿವಾಸಿಗಳಿಗೆ ಉದ್ಯೋಗ ಒದಗಿಸಲಾಗುವುದು ಎಂದು ಕಾರ್ಮಿಕ ಹಾಗೂ ಉದ್ಯೋಗ ಸಚಿವರು ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಎಸ್. ಲಾಡ್ ಹೇಳಿದರು.

ಧಾರವಾಡ ತಾಲೂಕಿನ ಕಲಕೇರಿ ಗ್ರಾಮ ಪಂಚಾಯಿತಿ ಆವರಣದಲ್ಲಿ ನಡೆದ ಜನಸಂಪರ್ಕ ಸಭೆ ಹಾಗೂ ಪ್ರಜಾಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಬಿ–ಜಿ ರಾಮ್ ಜಿ ಯೋಜನೆಗೆ ಸಂಬಂಧಿಸಿದಂತೆ ಯೋಜನಾ ಅನುಮೋದನೆ ಹಾಗೂ ಕಾಮಗಾರಿಗಳಿಗೆ ಅಧಿಕೃತ ಮಂಜೂರಾತಿ ದೊರೆತಿದೆ. ಹೀಗಾಗಿ ಮುಂಬರುವ ದಿನಗಳಲ್ಲಿ ಗ್ರಾಮಸ್ಥರು ಕೆಲಸಕ್ಕಾಗಿ ಬೇರೆ ಊರುಗಳಿಗೆ ತೆರಳುವ ಅಗತ್ಯವಿಲ್ಲ.

ಗ್ರಾಮದ ಜನರಿಗೆ ಇದೇ ಊರಿನಲ್ಲಿಯೇ ನಿಯಮಿತವಾಗಿ ಉದ್ಯೋಗ ದೊರೆಯುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ರೈತರು ಹಾಗೂ ಕೂಲಿಕಾರರಿಗೆ ಭರವಸೆ ನೀಡಿದರು.

ಗ್ರಾಮಗಳ ಅಭಿವೃದ್ಧಿಗೆ ಯುವಜನತೆ ಹಾಗೂ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ. ಜನರ ಸಮಸ್ಯೆಗಳಿಗೆ ಸ್ಪಂದಿಸಲು ಸರ್ಕಾರವೇ ಜನರ ಬಳಿಗೆ ಬಂದಿದೆ.



ಗ್ರಾಮ ಹಾಗೂ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಯುವಕರು, ಸಾರ್ವಜನಿಕರು ಮತ್ತು ಊರಿನ ಮುಖಂಡರು ಒಗ್ಗಟ್ಟಿನಿಂದ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಸಾರ್ವಜನಿಕರು ಸಲ್ಲಿಸಿರುವ ಪ್ರಮುಖ ಹಾಗೂ ತುರ್ತು ಬೇಡಿಕೆಗಳನ್ನು ಆದ್ಯತೆಯ ಮೇರೆಗೆ ನಿಗದಿತ ಅವಧಿಯಲ್ಲಿ ಹಂತ ಹಂತವಾಗಿ ಈಡೇರಿಸಲಾಗುವುದು. ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಲು ಸಾರ್ವಜನಿಕರ ಮೇಲ್ವಿಚಾರಣೆಯೂ ಅಗತ್ಯ ಎಂದು ಹೇಳಿದರು.

**ಮೂಲಸೌಕರ್ಯದಿಂದ ಶಿಕ್ಷಣದವರೆಗೆ ಭರವಸೆ**

ಗ್ರಾಮದ ಸ್ಮಶಾನಗಳ ಅಭಿವೃದ್ಧಿ, ಸಮುದಾಯ ಭವನಗಳ ನಿರ್ಮಾಣ ಹಾಗೂ ಹಾಳಾಗಿರುವ ಗ್ರಾಮೀಣ ರಸ್ತೆಗಳನ್ನು ತಕ್ಷಣವೇ ಸರಿಪಡಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಅಂಗವಿಕಲರಿಗೆ ಸ್ವಯಂ ಉದ್ಯೋಗಕ್ಕಾಗಿ ಅಂಗಡಿ ಸೌಲಭ್ಯ, ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ಆರ್ಥಿಕ ನೆರವು ನೀಡುವ ಕುರಿತು ಕ್ರಮ ಕೈಗೊಳ್ಳಲಾಗುವುದು ಎಂದರು. ಶಾಲಾ ಶೌಚಾಲಯಗಳ ನಿರ್ಮಾಣ,

ಮಾದರಿ ಶಾಲೆಗಳಿಗೆ ಹೆಚ್ಚುವರಿ ಕೊಠಡಿಗಳ ಅನುದಾನ ಹಾಗೂ ಕಲಕೇರಿ ಗ್ರಾಮದಲ್ಲಿ ನೂತನ ಕಾಲೇಜು ಸ್ಥಾಪನೆಗೂ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಕಲಕೇರಿ ಗ್ರಾಮದಲ್ಲಿ ಹೊಸ ಬ್ಯಾಂಕ್ ಶಾಖೆ ಹಾಗೂ ಪಶುಸಂಗೋಪನಾ ಆಸ್ಪತ್ರೆ ಸ್ಥಾಪನೆಗೆ ಸಾರ್ವಜನಿಕರಿಂದ ಸಲ್ಲಿಕೆಯಾದ ಅರ್ಜಿಗಳನ್ನು ಸ್ವೀಕರಿಸಿ ಪರಿಶೀಲಿಸಲಾಗಿದೆ ಎಂದರು.

ಗ್ರಾಮೀಣ ಯುವಕರನ್ನು ಸಂಘಟಿಸಲು ಹಾಗೂ ಕ್ರೀಡೆ, ಸಾಂಸ್ಕೃತಿಕ ಮತ್ತು ಸಾಮಾಜಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ 'ಭಾರತ ಜೋಡೋ' ಯುವ ಸಂಘಗಳ ಯೋಜನೆಯಡಿ ಅರ್ಹ ಯುವ ಸಂಘಗಳಿಗೆ ಪ್ರೋತ್ಸಾಹಧನ ನೀಡುವ ಯೋಜನೆಯ ಸದುಪಯೋಗ ಪಡೆಯುವಂತೆ ಸಚಿವರು ಕರೆ ನೀಡಿದರು.

> ಜನಪ್ರತಿನಿಧಿಗಳು ಜನಸೇವಕರು. ಗ್ರಾಮಗಳ ಸಮಸ್ಯೆ ಪರಿಹಾರಕ್ಕೆ ಪಕ್ಷಭೇದ ಮರೆತು ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಉದ್ಯೋಗಕ್ಕಾಗಿ ಗುಳೆ ಹೋಗುವ ಪರಿಸ್ಥಿತಿ ತಪ್ಪಿಸಿ, ಗ್ರಾಮದಲ್ಲಿಯೇ ಕೆಲಸ ಹಾಗೂ ಅಭಿವೃದ್ಧಿಯ ಅವಕಾಶ ಕಲ್ಪಿಸುವುದು ಸರ್ಕಾರದ ಆದ್ಯತೆಯಾಗಿದೆ.
>
> **-- ಸಂತೋಷ್ ಎಸ್. ಲಾಡ್, ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರು**

# ಬಸವೇಶ್ವರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕೃಷ್ಣ ಜನ್ಮಾಷ್ಟಮಿ ಆಚರಣೆ



**ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮದ ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಪೂರ್ವ ಪ್ರಾಥಮಿಕ ಹಾಗೂ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶುಕ್ರವಾರ ಶ್ರೀಕೃಷ್ಣ ಜನ್ಮಾಷ್ಟಮಿ ಸಂಭ್ರಮದಿಂದ ಆಚರಿಸಲಾಯಿತು.

ಧೋತಿ, ಕಿರೀಟ, ನವಿಲುಗರಿ ಧರಿಸಿ ಮುದ್ದು ಕೃಷ್ಣನ ವೇಷ ತೊಟ್ಟ ಪುಟಾಣಿಗಳು ಹಾಗೂ ಸಾಂಪ್ರದಾಯಿಕ ಉಡುಗೆಯಲ್ಲಿ ರಾಧೆ ಮತ್ತು ರುಕ್ಮಿಣಿಯರಾಗಿ ಸಿಂಗಾರಗೊಂಡ ಬಾಲಕಿಯರು ನೆರೆದವರ ಗಮನ ಸೆಳೆದರು. ಶಾಲಾ ಆವರಣದಲ್ಲಿ ಪುಟಾಣಿಗಳೇ ಬೃಂದಾವನದ ವಾತಾವರಣ ಸೃಷ್ಟಿಸಿದರು.

ಮುಖ್ಯಶಿಕ್ಷಕಿ ಜ್ಯೋತಿ ಗೌಡರ ಮಾತನಾಡಿ, ಲೋಕ ಕಲ್ಯಾಣಕ್ಕಾಗಿ ಅವತರಿಸಿದ ಶ್ರೀಕೃಷ್ಣನ ಬದುಕು, ಬೋಧನೆಗಳು ಹಾಗೂ ಧರ್ಮದ ಸಂದೇಶಗಳು ಎಲ್ಲರಿಗೂ ಆದರ್ಶಪ್ರಾಯವಾಗಿದ್ದು, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಸಹ ಶಿಕ್ಷಕಿಯರಾದ ಗೀತಾ ಕೋಲಾರ, ಶಶಿಕಲಾ ಚಟ್ಟೇರ, ಚೈತ್ರಾ ತಳಕಲ್ಲ, ಲಲಿತಾ ಬಾವಿ, ಮೇಘನಾ ಮುದಕವಿ, ಶಿಲ್ಪಾ ಶಿರೋಳ, ಮಹಾಮಾಯ ಗಂಭೀರ ಸೇರಿದಂತೆ ಶಾಲಾ ಸಿಬ್ಬಂದಿ ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

# ಸೆ. 8ರಂದು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸರ್ಕಾರದ ಮಹತ್ವಾಕಾಂಕ್ಷೆಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ, ಕಾರ್ಯವಿಧಾನ ಹಾಗೂ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜನರಿಗೆ ತಲುಪಿಸುವ ಕುರಿತು ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯನ್ನು ಸೆಪ್ಟೆಂಬರ್ 8ರಂದು ಆಯೋಜಿಸಲಾಗಿದೆ.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಅಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸಭೆ ನಡೆಯಲಿದೆ.

ಸಭೆಯಲ್ಲಿ ಸರ್ಕಾರದ ವಿವಿಧ ಗ್ಯಾರಂಟಿ ಯೋಜನೆಗಳ ಜಿಲ್ಲೆಯಲ್ಲಿ ಆಗಿರುವ ಪ್ರಗತಿ, ಯೋಜನೆಗಳ ಅನುಷ್ಠಾನದ ಸ್ಥಿತಿ ಹಾಗೂ ಎದುರಾಗಿರುವ ಸಮಸ್ಯೆಗಳ ಕುರಿತು ಸಮಗ್ರವಾಗಿ ಪರಿಶೀಲನೆ ನಡೆಸಲಾಗುವುದು.

ಎಲ್ಲ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆಗಳ ಪ್ರಗತಿ ವರದಿ ಹಾಗೂ ಅನುಪಾಲನಾ ವರದಿಯೊಂದಿಗೆ ಸಭೆಗೆ ಕಡ್ಡಾಯವಾಗಿ ಹಾಜರಾಗಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ನರೇಗಲ್ಲದಲ್ಲಿ 'ಪ್ರಜಾಸೇವೆ ಆಂದೋಲನ' ಸಭೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸಾಧ್ಯವಾದ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಒದಗಿಸುವ ಉದ್ದೇಶದಿಂದ ಸೆ. 5ರಂದು ಗಜೇಂದ್ರಗಡ ತಾಲ್ಲೂಕಿನ ನರೇಗಲ್ಲ ಹೋಬಳಿ ಮಟ್ಟದ 'ಪ್ರಜಾಸೇವೆ ಆಂದೋಲನ' ಸಭೆಯನ್ನು ನರೇಗಲ್ಲ ಪಟ್ಟಣ ಪಂಚಾಯಿತಿ ಆವರಣದಲ್ಲಿ ಆಯೋಜಿಸಲಾಗಿದೆ.

ಗದಗ ಜಿಲ್ಲಾಧಿಕಾರಿಗಳ ಆದೇಶದಂತೆ ಪ್ರತಿ ತಿಂಗಳ ಮೊದಲ ಶನಿವಾರದಂದು 'ಪ್ರಜಾಸೇವೆ ಆಂದೋಲನ' ಸಭೆಗಳನ್ನು ನಡೆಸಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಪರಿಹಾರ ಕಲ್ಪಿಸುವ ಉದ್ದೇಶ ಹೊಂದಲಾಗಿದೆ.


ಕಾರ್ಯಕ್ರಮದಲ್ಲಿ ತಾಲ್ಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದು, ಸಾರ್ವಜನಿಕರ ಕುಂದುಕೊರತೆಗಳು ಹಾಗೂ ಅಹವಾಲುಗಳನ್ನು ಸ್ವೀಕರಿಸಿ ಅವುಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಹಶೀಲ್ದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಲ್ಲೂಕಿನ ಎಲ್ಲ ಗ್ರಾಮಗಳ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ, ತಮ್ಮ ಸಮಸ್ಯೆಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ಸಲ್ಲಿಸಿ 'ಪ್ರಜಾಸೇವೆ ಆಂದೋಲನ'ದ ಸದುಪಯೋಗ ಪಡೆದುಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

# ಇಂದು ಬಿ.ಜಿ. ಅಣ್ಣಿಗೇರಿ ಪ್ರತಿಭಾ ಪ್ರತಿಷ್ಠಾನದ ವಾರ್ಷಿಕ ಸಭೆ-ಪ್ರಶಸ್ತಿ ಪ್ರದಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಶಿಕ್ಷಣ ಕ್ಷೇತ್ರದ ಹಿರಿಯ ಮಾರ್ಗದರ್ಶಿ ಬಿ.ಜಿ. ಅಣ್ಣಿಗೇರಿ ಗುರುಗಳ 7ನೇ ಪುಣ್ಯಸ್ಮರಣೆ ಅಂಗವಾಗಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ (ರಿ)



ವತಿಯಿಂದ ಸೆಪ್ಟೆಂಬರ್ 5ರಂದು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ನಗರದ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದ ಪ್ರಾಂಗಣದಲ್ಲಿ ಶನಿವಾರ ಬೆಳಿಗ್ಗೆ 11 ಗಂಟೆಗೆ ಪುಣ್ಯಸ್ಮರಣೆ, ಪ್ರತಿಷ್ಠಾನದ ವಾರ್ಷಿಕ ಸರ್ವಸಾಧಾರಣ ಸಭೆ ಹಾಗೂ ಗುರುಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಸಮಾರಂಭದ ಸಾನಿಧ್ಯವನ್ನು ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ನಿವೃತ್ತ ಮುಖ್ಯೋಪಾಧ್ಯಾಯರಾದ ದಿವಂಗತ ಶಂಕ್ರಪ್ಪ ಗುರಪ್ಪ ಅಣ್ಣಿಗೇರಿ ಅವರಿಗೆ ಮರಣೋತ್ತರವಾಗಿ ಗುರುಶ್ರೀ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು.

ಮುಖ್ಯ ಅತಿಥಿಗಳಾಗಿ ಡಾ. ಅಶೋಕ ಭಜಂತ್ರಿ, ಎಂ.ಎಚ್. ಪ್ರದೀಪಕುಮಾರ ಹಾಗೂ ಶಿವಕುಮಾರ ಎಚ್. ಪಾಟೀಲ ಭಾಗವಹಿಸುವರು.ಪ್ರತಿಷ್ಠಾನದ ಉಪಾಧ್ಯಕ್ಷ ಡಾ. ಬಸಯ್ಯ ಬೆಳ್ಳೇರಿಮಠ, ಕಾರ್ಯದರ್ಶಿ ಸುಭಾಸಚಂದ್ರ ಬೆಟದೂರ, ಖಜಾಂಚಿ ವಿಜಯಲಕ್ಷ್ಮೀ ಅಂಗಡಿ ಹಾಗೂ ನಿರ್ದೇಶಕರಾದ ಡಾ. ಶರಣಬಸವ ಚೌಕಿಮಠ, ಶಿವಪ್ಪ ಕತ್ತಿ, ಆಂಜನೇಯ ಕಟಗಿ, ಸಿದ್ಧಲಿಂಗನಗೌಡ ಪಾಟೀಲ, ಡಾ. ಬಸವರಾಜ ಚನ್ನಪ್ಪಗೌಡರ ಮತ್ತು ಗುರುರಾಜ ಅಣ್ಣಿಗೇರಿ ಉಪಸ್ಥಿತ-ರಿರುವರು. ಕಾರ್ಯಕ್ರಮಕ್ಕೆ ಬಿ.ಜಿ. ಅಣ್ಣಿಗೇರಿ ಗುರುಗಳ ಶಿಷ್ಯರು, ಶಿಕ್ಷಣಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪ್ರಕಟಣೆಯಲ್ಲಿ ಮನವಿ ಮಾಡಲಾಗಿದೆ.

### ಸಾಹಿತ್ಯ ಸಂಶೋಧನಾ ಕ್ಷೇತ್ರಕ್ಕೆ ಅವರ ಕೊಡುಗೆ ಅಪಾರ : ತೋಂಟದ ಸಿದ್ಧರಾಮ ಶ್ರೀಗಳು

# ವಚನ ಲೋಕದ ಸಂಶೋಧನಾ ದೀಪ ಕಲಬುರ್ಗಿ



> ವಚನ ಸಾಹಿತ್ಯವನ್ನು ಕೇವಲ ಅಧ್ಯಯನದ ವಿಷಯವಾಗಿ ನೋಡದೆ, ಅದರ ಆಳಕ್ಕೆ ಇಳಿದು ಸಂಶೋಧನೆ, ಸಂಪಾದನೆ ಮತ್ತು ಪ್ರಕಟಣೆಯ ಮೂಲಕ ಮುಂದಿನ ಪೀಳಿಗೆಗೆ ತಲುಪಿಸಿದ ಮಹತ್ವದ ಸಾಧಕರಲ್ಲಿ ಡಾ. ಎಂ.ಎಂ. ಕಲಬುರ್ಗಿ ಅವರು ಅಗ್ರಗಣ್ಯರು. ಅವರ ಸಾಹಿತ್ಯಿಕ ಮತ್ತು ಸಂಶೋಧನಾ ಸೇವೆ ಸದಾಕಾಲ ಸ್ಮರಣೀಯ.
>
> - ಡಾ. ತೋಂಟದ ಸಿದ್ಧರಾಮ ಸ್ವಾಮಿಗಳು

**ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಸಾಹಿತ್ಯ, ವಚನ ಸಾಹಿತ್ಯ ಹಾಗೂ ಸಂಶೋಧನಾ ಕ್ಷೇತ್ರದಲ್ಲಿ ಡಾ. ಎಂ.ಎಂ. ಕಲಬುರ್ಗಿ ಅವರು ಸಲ್ಲಿಸಿದ ಸೇವೆ ಅಪಾರ ಮತ್ತು ಅನುಪಮವಾದದ್ದು ಎಂದು ಡಾ. ತೋಂಟದ ಸಿದ್ಧರಾಮ ಸ್ವಾಮಿಗಳು ಹೇಳಿದರು.

ನಗರದ ತೋಂಟದಾರ್ಯ ಮಠದಲ್ಲಿ ನಡೆದ ಲಿಂಗಾಯತ ಪ್ರಗತಿಶೀಲ ಸಂಘದ 2813ನೇ ಶಿವಾನುಭವ ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಮಾತನಾಡಿದ ಅವರು, ಅನೇಕ ಶರಣರ ವಚನಗಳ ಸಂಶೋಧನೆ, ಸಂಪಾದನೆ ಹಾಗೂ ಪ್ರಕಟಣೆಯ ಮೂಲಕ ಡಾ. ಕಲಬುರ್ಗಿ ಅವರು ವಚನ ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ ಎಂದರು.

ತೋಂಟದಾರ್ಯ ಮಠದ ಪುಸ್ತಕ ಪ್ರಕಟಣೆಯ ಕಾರ್ಯದ ಹಿಂದಿನ ಪ್ರಮುಖ ಶಕ್ತಿಯಾಗಿದ್ದ ಡಾ. ಎಂ.ಎಂ. ಕಲಬುರ್ಗಿ ಅವರು ಸದಾಕಾಲ ಸ್ಮರಣೀಯರು. ಶ್ರೇಷ್ಠ ಶಿಕ್ಷಕ, ಸಂಶೋಧಕ ಹಾಗೂ ಸಮರ್ಥ ಆಡಳಿತಾಧಿಕಾರಿಯಾಗಿದ್ದ ಅವರು ವೈಚಾರಿಕ ಚಿಂತನೆಯ ಪ್ರತಿಪಾದಕರಾಗಿದ್ದರು ಎಂದು ಶ್ರೀಗಳು ಸ್ಮರಿಸಿದರು.

ಶ್ರಾವಣ ಮಾಸವು ಲಿಂಗಾಯತ ಧರ್ಮದಲ್ಲಿ ವಿಶೇಷ ಮಹತ್ವ ಹೊಂದಿದೆ. ಬಸವಾದಿ ಶರಣರ ಆದರ್ಶಗಳು ಮತ್ತು ಮಹಾತ್ಮರ ಸಂದೇಶಗಳನ್ನು ಕೇಳುವುದರೊಂದಿಗೆ ಅವುಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಅಷ್ಟಮದ ಆರು ವೈರಿಗಳು ಹಾಗೂ ಸಪ್ತವ್ಯಸನಗಳಿಂದ ದೂರವಾಗಿ ಶರಣರ ಮಾರ್ಗದಲ್ಲಿ ಸಾಗಿದಾಗ ಜೀವನ ಪಾವನವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಡಾ. ಶರಣಬಸವ ವೆಂಕಟಾಪೂರ ಅವರು, ಆಳವಾದ ಅಧ್ಯಯನ, ಹೊಸ ವಿಷಯಗಳ ಹುಡುಕಾಟ ಮತ್ತು ಸಂಶೋಧನೆಯೇ ಡಾ. ಎಂ.ಎಂ. ಕಲಬುರ್ಗಿ ಅವರ ಜೀವನಧ್ಯೇಯವಾಗಿತ್ತು ಎಂದರು. ವಚನ ಸಾಹಿತ್ಯದ ಸಂಶೋಧನೆ, ಸಂಪಾದನೆ ಹಾಗೂ ಪ್ರಕಟಣೆಯಲ್ಲಿ ಅವರು ಮಾಡಿದ ಕಾರ್ಯ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಕನ್ನಡ ಮತ್ತು ವಚನ ಸಾಹಿತ್ಯದ ಬೆಳವಣಿಗೆಯ ಬಗ್ಗೆ ಅಪಾರ ಕಾಳಜಿ ಹೊಂದಿದ್ದ ಕಲಬುರ್ಗಿ ಅವರು, ಕರ್ನಾಟಕದಲ್ಲಿ ಉದಯವಾದ ಲಿಂಗಾಯತ ಧರ್ಮವು ತನ್ನ ವಿಶಿಷ್ಟತೆಯೊಂದಿಗೆ ಸ್ವತಂತ್ರವಾಗಿ ಬೆಳೆಯಬೇಕು ಎಂಬ ಆಶಯ ಹೊಂದಿದ್ದರು ಎಂದು ಹೇಳಿದರು.

*ನಾರಿ ಸಮ್ಮಾನ ಪುರಸ್ಕೃತರಿಗೆ ಗೌರವ*

ಇದೇ ಸಂದರ್ಭದಲ್ಲಿ ನಾರಿ ಸಮ್ಮಾನ ಪುರಸ್ಕೃತರಾದ ಗದುಗಿನ ಶ್ರೀಮತಿ ಸುವರ್ಣ ಸದಾಶಿವಯ್ಯ ಮದರಿಮಠ ಅವರನ್ನು ಗೌರವಿಸಿ ಸನ್ಮಾನಿಸಲಾಯಿತು.

ಶರಣೆ ಗಿರಿಜಕ್ಕ ಧರ್ಮರಡ್ಡಿ ಅವರು 'ಶರಣರು ಕಂಡ ಅನಾದಿ ಬಸವಣ್ಣ' ವಿಷಯ ಕುರಿತು ಪ್ರವಚನ ನೀಡಿದರು. ರೇವಣಸಿದ್ದಯ್ಯ ಮರಿದೇವರಮಠ ಹಾಗೂ ಬಸವರಾಜ ಗಣಪ್ಪನವರ ದಾಸೋಹ ಸೇವೆ ವಹಿಸಿದ್ದರು. ಸೂರಜ ಮರಿಗೌಡರ ಧರ್ಮಗ್ರಂಥ ಪಠಣ ನಡೆಸಿದರೆ, ಕೃತಿಕಾ ಮರಿಗೌಡ ವಚನ ಚಿಂತನ ಮಾಡಿದರು.

ವಿಜಯ ಕಿರೇಸೂರ ನಿರ್ದೇಶನದಲ್ಲಿ ಸ್ವಾತಂತ್ರ್ಯ ಸಂಗ್ರಾಮ ಕುರಿತ ಕೈಗೊಂಬೆ ಆಟವನ್ನು ಕದಾಂಪೂರ ಸರ್ಕಾರಿ ಪ್ರೌಢಶಾಲೆಯ ಮಕ್ಕಳು ಪ್ರದರ್ಶಿಸಿದರು. ಕಾರ್ಯಕ್ರಮವನ್ನು ವಿದ್ಯಾ ಗಂಜಾಳ ನಿರೂಪಿಸಿದರು. ಡಾ. ಉಮೇಶ ಪುರದ ಸ್ವಾಗತಿಸಿದರು.

ಶಿವಾನುಭವದಲ್ಲಿ ಸಂಘದ ಉಪಾಧ್ಯಕ್ಷ ಪ್ರಭು ಗಂಜಿಹಾಳ, ಸುರೇಖಾ ಪಿಳ್ಳಿ, ಕಾರ್ಯದರ್ಶಿ ಸಿದ್ಧರಾಮ ಪಟ್ಟೇದ, ಸಹಕಾರ್ಯದರ್ಶಿ ಪ್ರತಿಭಾ ಬಡ್ನಿ, ಕೋಶಾಧ್ಯಕ್ಷ ವೀರಣ್ಣ ಗೋಟಡಕಿ, ಕೆ.ಎಸ್. ಕೋರಿಮಠ, ಸೋಮಶೇಖರ ಪುರಾಣಿಮಠ, ಆದೇಶ ಅಂಗಡಿ ಸೇರಿದಂತೆ ಶ್ರೀಮಠದ ಸದ್ಭಕ್ತರು ಭಾಗವಹಿಸಿದ್ದರು.

### ಲಕ್ಕುಂಡಿ ಅನ್ನದಾನೀಶ್ವರ ಶಾಖಾ ಮಠದಲ್ಲಿ ಪ್ರವಚನ ಮಂಗಲೋತ್ಸವ-ಸಾಮೂಹಿಕ ವಿವಾಹ

# ಶರಣರ ಆದರ್ಶ ದಾಂಪತ್ಯಕ್ಕೆ ದಾರಿದೀಪ



> ಶರಣರ ತತ್ವಾದರ್ಶಗಳು ಕೇವಲ ಮಾತಿಗೆ ಸೀಮಿತವಾಗದೆ ಪ್ರತಿಯೊಬ್ಬರ ಬದುಕಿನ ಭಾಗವಾಗಬೇಕು. ವಿಶೇಷವಾಗಿ ನೂತನ ದಂಪತಿಗಳು ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸಹಕಾರದಿಂದ ಜೀವನ ನಡೆಸಿದಾಗ ದಾಂಪತ್ಯ ಬದುಕು ಸುಂದರವಾಗುತ್ತದೆ.
>
> - ನಾಡೋಜ ಡಾ. ಅನ್ನದಾನೀಶ್ವರ ಮಹಾಸ್ವಾಮೀಜಿಗಳು

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

12ನೇ ಶತಮಾನದ ಶರಣರ ತತ್ವಾದರ್ಶಗಳನ್ನು ನೂತನ ದಂಪತಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಪರಸ್ಪರ ಪ್ರೀತಿ, ವಿಶ್ವಾಸ ಹಾಗೂ ಗೌರವದಿಂದ ಬದುಕು ಸಾಗಿಸಬೇಕು ಎಂದು ಮುಂಡರಗಿಯ ನಾಡೋಜ ಡಾ. ಅನ್ನದಾನೀಶ್ವರ ಮಹಾಸ್ವಾಮೀಜಿಗಳು ಹೇಳಿದರು.

ಇಲ್ಲಿನ ಅನ್ನದಾನೀಶ್ವರ ಶಾಖಾ ಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಂಡಿದ್ದ ಶರಣರ ತತ್ವಚಿಂತನೆ ಪ್ರವಚನ, ಮಂಗಲೋತ್ಸವ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಶಾಖಾ ಮಠ ನಿರ್ಮಾಣದ ಸಂದರ್ಭದಲ್ಲಿ ಈ ಸ್ಥಳದಲ್ಲಿ ಮೂವರು ಶರಣರ ಅಸ್ಥಿಪಂಜರಗಳು ಪತ್ತೆಯಾಗಿದ್ದು, ಸಂಶೋಧನೆಯಿಂದ ಅವು ಸುಮಾರು 400 ವರ್ಷಗಳಷ್ಟು ಹಳೆಯವು ಎಂಬುದು ತಿಳಿದುಬಂದಿದೆ. ಹೀಗಾಗಿ ಲಕ್ಕುಂಡಿಯ ಅನ್ನದಾನೀಶ್ವರ ಶಾಖಾ ಮಠದ ಗದ್ದುಗೆ ವಿಶೇಷ ಮಹತ್ವ ಹೊಂದಿದೆ ಎಂದು ಶ್ರೀಗಳು ತಿಳಿಸಿದರು.

ಮುಂಡರಗಿಯ ಅನ್ನದಾನೀಶ್ವರ ಸಂಸ್ಥಾನ ಮಠವು ತ್ರಿವಿಧ ದಾಸೋಹ ಪರಂಪರೆಯನ್ನು ಹೊಂದಿದ್ದು, ನಾಡಿನ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಭೂದಾನ ಹಾಗೂ ಧನಸಹಾಯ ನೀಡಿದೆ. ಈ ಹಿನ್ನೆಲೆ ಲಕ್ಕುಂಡಿ ಶಾಖಾ ಮಠದ ಅಭಿವೃದ್ಧಿಗೂ ಜನಪ್ರತಿನಿಧಿಗಳು ಅಗತ್ಯ ಅನುದಾನ ಒದಗಿಸಬೇಕು ಎಂದು ಮನವಿ ಮಾಡಿದರು.

ಮಾಜಿ ಸಚಿವ ಬಿ.ಆರ್. ಯಾವಗಲ್ ಮಾತನಾಡಿ, ನಾಡಿನಲ್ಲಿ ಬರಗಾಲದ ಛಾಯೆ ಆವರಿಸಿರುವ ಸಂದರ್ಭದಲ್ಲಿ ಶರಣರ ತತ್ವಬೋಧನೆಗಳನ್ನು ಸಾರುವ ಪುರಾಣ ಹಾಗೂ ಪ್ರವಚನ ಕಾರ್ಯಕ್ರಮಗಳು ನಡೆಯುತ್ತಿರುವುದು ಶ್ಲಾಘನೀಯ ಎಂದರು.

ಬಿಜೆಪಿ ಯುವ ಮುಖಂಡ ಉಮೇಶಗೌಡ ಪಾಟೀಲ ಮಾತನಾಡಿ, ಉತ್ತಮ ಸಂಸ್ಕೃತಿ, ಸಂಪ್ರದಾಯ ಹಾಗೂ ಪರಂಪರೆಯ ಶ್ರೀಮಂತಿಕೆಯನ್ನು ಭಾರತ ಹೊಂದಿದೆ. ಅನೇಕ ಶರಣರು ತಾವು ನುಡಿದಂತೆ ನಡೆದು ಸಮಾಜಕ್ಕೆ ಮಾರ್ಗದರ್ಶಕರಾಗಿದ್ದು, ಅವರ ತತ್ವಾದರ್ಶಗಳ ಪ್ರವಚನ ಹಾಗೂ ಪುರಾಣಗಳು ಸಮಾಜದಲ್ಲಿನ ಸ್ವಾರ್ಥ ಮತ್ತು ಅಹಂಕಾರವನ್ನು ದೂರ ಮಾಡುವಲ್ಲಿ ಸಹಕಾರಿಯಾಗುತ್ತಿವೆ ಎಂದು ಹೇಳಿದರು.


ಹರ್ಲಾಪುರದ ಡಾ. ಕೊಟ್ಟೂರೇಶ್ವರ ಸ್ವಾಮೀಜಿ ಹಾಗೂ ಕುಕನೂರಿನ ಡಾ. ಮಹಾದೇವ ಸ್ವಾಮೀಜಿ ಮಾತನಾಡಿದರು. ಡಾ. ಗಿರಿಜಾ ಹಸಬಿ, ಷಡಕ್ಷರಯ್ಯ ಬದ್ನಿಮಠ ಹಾಗೂ ವೀರಣ್ಣ ಕರಿಯಲ್ಲಪ್ಪನವರ ಸಂಗೀತ ಸೇವೆ ಸಲ್ಲಿಸಿದರು.

ಶಂಕ್ರಯ್ಯ ಹಿರೇಮಠ, ಯುವ ಧುರೀಣ ವೀರಯ್ಯ ಗಂಧದ, ತಾ.ಪಂ. ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ಗ್ರಾ.ಪಂ. ಮಾಜಿ ಅಧ್ಯಕ್ಷ ಕೆ.ಎಸ್. ಪೂಜಾರ, ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ, ಲಕ್ಕುಂಡಿ ಬಿಜೆಪಿ ಮಂಡಲ ಅಧ್ಯಕ್ಷ ಪ್ರಕಾಶ ಅರಹುಣಶಿ, ನಿಂಗಪ್ಪ ಗುಂಜಳ ಹಾಗೂ ಚನ್ನಪ್ಪ ಹೂಗಾರ ವೇದಿಕೆಯಲ್ಲಿದ್ದರು.

ಪ್ರವಚನ ಕಾರ್ಯಕ್ರಮದಲ್ಲಿ ಸೇವೆ ಸಲ್ಲಿಸಿದ ಮಹನೀಯರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಮುತ್ತಪ್ಪ ನೋಟಗಾರ ಸ್ವಾಗತಿಸಿದರು. ಅಂಬರೀಶ ಕರೆಕಲ್ಲ ನಿರೂಪಿಸಿದರು. ಶಿಕ್ಷಕ ಬಸವರಾಜ ಕಣವಿ ವಂದಿಸಿದರು.

### ಆರ್ಯಭಟ ಕಾಲೇಜಿನಲ್ಲಿ 'ಆಹಾರ ಸಂಸ್ಕರಣೆ ಹಾಗೂ ಕಲಬೆರಕೆ' ಕುರಿತು ಜಾಗೃತಿ ಕಾರ್ಯಕ್ರಮ

# ಆಹಾರದ ಅರಿವಿಲ್ಲದಿದ್ದರೆ ದೇಶದ ಭವಿಷ್ಯ ಅಭದ್ರ



**ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚಿನ ದಿನಗಳಲ್ಲಿ ಆಹಾರ ಸಂಸ್ಕರಣೆ ಹಾಗೂ ಕಲಬೆರಕೆಯಿಂದ ಆಹಾರ ಪದಾರ್ಥಗಳು ವಿಷಕಾರಿಯಾಗುತ್ತಿರುವ ಆತಂಕಕಾರಿ ಬೆಳವಣಿಗೆ ಕಂಡುಬರುತ್ತಿದೆ. ಯುವಜನರಿಗೆ ಆರೋಗ್ಯಕರ ಆಹಾರದ ಕುರಿತು ಸೂಕ್ತ ಅರಿವು ಇಲ್ಲದಿದ್ದರೆ ದೇಶದ ಭವಿಷ್ಯವೇ ಅಭದ್ರವಾಗುವ ಸಾಧ್ಯತೆಯಿದೆ ಎಂದು ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಆಹಾರ ಮತ್ತು ತಂತ್ರಜ್ಞಾನ ವಿಭಾಗದ ಮುಖ್ಯಸ್ಥೆ ಡಾ. ಸಾವಿತ್ರಿ ಬ್ಯಾಡಗಿ ಹೇಳಿದರು.

ನಗರದ ಐ.ಪಿ.ಇ.ಟಿ. ಸಂಸ್ಥೆಯ ಆರ್ಯಭಟ ವಿಜ್ಞಾನ ಹಾಗೂ ವಾಣಿಜ್ಯ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ 'ಆಹಾರ ಸಂಸ್ಕರಣೆ ಹಾಗೂ ಕಲಬೆರಕೆ' ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಅವರು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಹಿಂದಿನ ತಲೆಮಾರಿನವರು ಸಾಂಪ್ರದಾಯಿಕ ಹಾಗೂ ಪೌಷ್ಟಿಕ ಆಹಾರ ಸೇವಿಸುವ ಮೂಲಕ ಉತ್ತಮ ಆರೋಗ್ಯ ಕಾಪಾಡಿಕೊಂಡಿದ್ದರು. ಆದರೆ ಇಂದು ಜಂಕ್ ಫುಡ್ ಮತ್ತು ಫಾಸ್ಟ್ ಫುಡ್‌ನ ಕ್ಷಣಿಕ ರುಚಿ ಹಾಗೂ ಆಕರ್ಷಣೆಗೆ ಮರುಳಾಗಿ ಯುವಜನರು ತಮ್ಮ ಆರೋಗ್ಯವನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಭವಿಷ್ಯದ ಬಗ್ಗೆ ಎಷ್ಟೇ ಕನಸುಗಳನ್ನು ಕಟ್ಟಿಕೊಂಡರೂ ಅವುಗಳನ್ನು ಸಾಕಾರಗೊಳಿಸಲು ಆರೋಗ್ಯಕರ ದೇಹ ಅಗತ್ಯ. ರುಚಿಗೆ ದಾಸರಾಗದೆ ಪೌಷ್ಟಿಕ ಆಹಾರ ಸೇವನೆಗೆ ಆದ್ಯತೆ ನೀಡಬೇಕು ಎಂದು ಡಾ. ಸಾವಿತ್ರಿ ಬ್ಯಾಡಗಿ ಕಿವಿಮಾತು ಹೇಳಿದರು.

ನವಧಾನ್ಯಗಳು, ತರಕಾರಿಗಳು ಹಾಗೂ ಹಣ್ಣುಗಳನ್ನು ಆಹಾರದಲ್ಲಿ ಹೆಚ್ಚಾಗಿ ಬಳಸಬೇಕು. ಪಾಶ್ಚಾತ್ಯ ಆಹಾರ ಪದ್ಧತಿಯನ್ನು ಅಂಧಾನುಕರಣ ಮಾಡುವ ಬದಲು ಪ್ರೋಟೀನ್, ಕಬ್ಬಿಣಾಂಶ ಹಾಗೂ ವಿಟಮಿನ್‌ಯುಕ್ತ ಸಮತೋಲಿತ ಆಹಾರ ಸೇವಿಸಬೇಕು ಎಂದರು. ಯಾವುದೇ ಆಹಾರ ಪದಾರ್ಥ ಖರೀದಿಸುವ ಮುನ್ನ ಅದರಲ್ಲಿರುವ ಪದಾರ್ಥಗಳು ಹಾಗೂ ಪೋಷಕಾಂಶಗಳ ವಿವರವನ್ನು ಪರಿಶೀಲಿಸುವ ಅಭ್ಯಾಸ ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಐ.ಪಿ.ಇ.ಟಿ. ಸಂಸ್ಥೆಯ ಅಧ್ಯಕ್ಷ ಶರಣ್ ರಡ್ಡೇರ ವಿದ್ಯಾರ್ಥಿಗಳಿಗೆ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಕುರಿತು ಸಲಹೆ ನೀಡಿದರು. ಜೀವಶಾಸ್ತ್ರ ಉಪನ್ಯಾಸಕಿ ಮಿಸ್ಬಾ ಶಿರಹಟ್ಟಿ ಆಹಾರ ಸಂಸ್ಕರಣೆ ಕುರಿತು ವಿಶೇಷ ಸ್ಲೈಡ್ ಶೋ ಏರ್ಪಡಿಸಿದ್ದು, ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿನಿಯರು ವಿವರಣಾತ್ಮಕ ಪ್ರದರ್ಶನಗಳನ್ನು ನೀಡಿದರು.

ಕನ್ನಡ ಉಪನ್ಯಾಸಕ ಚಿದಾನಂದಪ್ಪ ಕೊಪ್ಪಳ ಕಾರ್ಯಕ್ರಮ ನಿರೂಪಿಸಿದರು. ಕಾಲೇಜಿನ ಪ್ರಾಚಾರ್ಯ ಸಂಗಮೇಶ ಸಿ.ಕೆ., ಉಪಪ್ರಾಚಾರ್ಯ ಪ್ರಶಾಂತ ಕುಮಾರ ದೊಡ್ಡಮನಿ ಸೇರಿದಂತೆ ಉಪನ್ಯಾಸಕರು ಉಪಸ್ಥಿತರಿದ್ದರು.

### ಅಕ್ಕಮಹಾದೇವಿ ಕದಳಿಶ್ರೀ ವೇದಿಕೆಯಿಂದ ಮಕ್ಕಳಿಗೆ ಅಮೃತ ಭೋಜನ-ಕಲಿಕಾ ಸಾಮಗ್ರಿ ವಿತರಣೆ

# ಮೌಲ್ಯಗಳೊಂದಿಗೆ ಸಾಧನೆ ಮಾಡಿದರೆ ಬದುಕು ಸಾರ್ಥಕ



**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಸಂಸ್ಕೃತಿಯ ಮೌಲ್ಯಗಳು ಜಗತ್ತಿಗೇ ಮಾದರಿಯಾಗಿದ್ದು, ಮಕ್ಕಳು ಬಾಲ್ಯದಲ್ಲಿಯೇ ಹಿರಿಯರ ಮಾರ್ಗದರ್ಶನ ಪಡೆದು ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಂಡು ಶೈಕ್ಷಣಿಕವಾಗಿ ಸಾಧನೆ ಮಾಡಬೇಕು ಎಂದು ಚಿಂತಕಿ ಸುರೇಖಾ ರಾಜಣ್ಣ ಮಲ್ಲಾಡದ ಹೇಳಿದರು.

ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ. 13ರಲ್ಲಿ ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆ ವತಿಯಿಂದ ಶ್ರಾವಣ ಮಾಸದ ಅಂಗವಾಗಿ ಆಯೋಜಿಸಿದ್ದ 'ಅಮೃತ ಭೋಜನ-ಜ್ಞಾನ ಸಿಂಚನ' ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸಿಹಿ ಭೋಜನ ಹಾಗೂ ಕಲಿಕಾ ಸಾಮಗ್ರಿ ವಿತರಿಸಿ ಅವರು ಮಾತನಾಡಿದರು.

ಮಕ್ಕಳು ಕೇವಲ ಪಠ್ಯಾಭ್ಯಾಸಕ್ಕೆ ಸೀಮಿತವಾಗದೆ ಶರಣರ ನುಡಿಗಳು, ಅನುಭವಿಗಳ ನುಡಿಮುತ್ತುಗಳು ಹಾಗೂ ಮಹಾನ್ ಸಾಧಕರ ಜೀವನ ಚರಿತ್ರೆಗಳನ್ನು ಓದಿ ತಿಳಿಯಬೇಕು. ಅವರ ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ತಾವೂ ಸಾಧಕರಾಗಬೇಕು ಎಂದು ಸುರೇಖಾ ಮಲ್ಲಾಡದ ಕರೆ ನೀಡಿದರು.

ನಿವೃತ್ತ ಪ್ರಾಚಾರ್ಯ ವೈ.ಎಸ್. ಕೊಂಡಿ ಮಾತನಾಡಿ, ಬಾಲ್ಯದಲ್ಲಿ ಕಲಿತ ವಿಚಾರಗಳು ಜೀವನದುದ್ದಕ್ಕೂ ಉಳಿಯುವುದರಿಂದ ಮಕ್ಕಳ ವ್ಯಕ್ತಿತ್ವ ರೂಪುಗೊಳ್ಳುವಲ್ಲಿ ಬಾಲ್ಯದ ಶಿಕ್ಷಣ ಅತ್ಯಂತ ಮಹತ್ವದ್ದಾಗಿದೆ ಎಂದರು. ಈ ಹಂತದಲ್ಲಿಯೇ ಉತ್ತಮ ಹಾಗೂ ಮೌಲ್ಯಾಧಾರಿತ ಗುಣಗಳನ್ನು ಬೆಳೆಸಿಕೊಂಡು ಹಿರಿಯರಿಗೆ ಗೌರವ ನೀಡಬೇಕು ಎಂದು ಸಲಹೆ ನೀಡಿದರು.

ಅತಿಥಿ ಪಿ.ಎಸ್. ರೋಣದ ಮಾತನಾಡಿ, ಭಾರತೀಯ ಸಂಸ್ಕೃತಿ ಕೇವಲ ಉಡುಗೆ-ತೊಡುಗೆ ಮತ್ತು ಹಬ್ಬ-ಹರಿದಿನಗಳಿಗೆ ಸೀಮಿತವಾಗಿಲ್ಲ. ಪ್ರೀತಿ, ಗೌರವ, ಶಿಸ್ತು, ಸತ್ಯ, ಪ್ರಾಮಾಣಿಕತೆ ಹಾಗೂ ಪರಸ್ಪರ ಸಹಕಾರದಂತಹ ಜೀವನ ಮೌಲ್ಯಗಳೇ ನಮ್ಮ ಸಂಸ್ಕೃತಿಯ ನಿಜವಾದ ಶಕ್ತಿಯಾಗಿವೆ ಎಂದರು.

ವೇದಿಕೆಯ ಸಂಚಾಲಕಿ ಕವಿತಾ ದಂಡಿನ ಪ್ರಾಸ್ತಾವಿಕವಾಗಿ ಮಾತನಾಡಿ, ವೈವಿಧ್ಯತೆಯಲ್ಲಿನ ಏಕತೆಯೇ ಭಾರತೀಯ ಸಂಸ್ಕೃತಿಯ ಪ್ರಮುಖ ವೈಶಿಷ್ಟ್ಯವಾಗಿದೆ. ಆಧುನಿಕ ಶಿಕ್ಷಣದೊಂದಿಗೆ ನಮ್ಮ ಸಂಸ್ಕೃತಿ ಹಾಗೂ ಪರಂಪರೆಯ ಅರಿವು ಮಕ್ಕಳಲ್ಲಿ ಮೂಡಿಸುವುದು ಅಗತ್ಯ ಎಂದರು.

ವೇದಿಕೆಯ ಮೇಲೆ ಜ್ಯೋತಿ ಉಮನಾಬಾದಿ, ನಂದೀಶ ಮಲ್ಲಾಡದ ಹಾಗೂ ಸ್ಮಿತಾ ಉಮನಾ ಬಾದಿ ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಅತಿಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಗೌತಮಿ ವಸಂತ ಪಡಗದ ಅವರ ಹುಟ್ಟುಹಬ್ಬದ ಅಂಗವಾಗಿ ಶುಭ ಹಾರೈಸಲಾಯಿತು.

ವಿದ್ಯಾರ್ಥಿಗಳಾದ ರೇವತಿ ಪೂಜಾರ, ಕೌಶಲ್ಯ ಗಡ್ಡದ, ಚೈತ್ರಾ ಮೆಣಸಗಿ, ರೇಣುಕಾ ಜಾಲವಾಡಗಿ ಹಾಗೂ ಪುಟ್ಟರಾಜ ವಚನ ಪ್ರಾರ್ಥನೆ ಸಲ್ಲಿಸಿದರು. ಶಾಲೆಯ ಮುಖ್ಯೋಪಾಧ್ಯಾಯಿನಿ ಸುಧಾ ಬೇವಿನಮಟ್ಟಿ ಸ್ವಾಗತಿಸಿ ನಿರೂಪಿಸಿದರು. ಶಾರದಾ ಅಂಗಡಿ ವಂದಿಸಿದರು.

# ಸೆ. 7ರಿಂದ ನಗರಸಭೆ ಎದುರು ಪ್ರತಿಭಟನೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರಸಭೆ ವ್ಯಾಪ್ತಿಯಲ್ಲಿ ಹಲವು ವರ್ಷಗಳಿಂದ ಕಸ ಸಂಗ್ರಹಣೆ ಹಾಗೂ ಸ್ವಚ್ಛತಾ ಕಾರ್ಯದಲ್ಲಿ ತೊಡಗಿರುವ ಕಾರ್ಮಿಕರನ್ನು ಪರಿಗಣಿಸದೆ ಹೊಸ ನೇಮಕಾತಿ ಮಾಡಬಾರದು. ಈಗಾಗಲೇ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರನ್ನೇ ನೇರ ಪಾವತಿ ಅಡಿಯಲ್ಲಿ ಖಾಯಂಗೊಳಿಸಬೇಕು ಎಂದು ಕೃಷ್ಣ ಪರಾಪುರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳ ಭರ್ತಿಗೆ ಆಗಸ್ಟ್ 29ರಂದು ಅರ್ಜಿ ಆಹ್ವಾನಿಸಲಾಗಿದೆ. ಸುಮಾರು 20 ವರ್ಷಗಳಿಂದ ನಗರದಲ್ಲಿ ಮನೆ-ಮನೆಗೆ ತೆರಳಿ ಕಸ ಸಂಗ್ರಹಿಸುವ ಕಾರ್ಮಿಕರ ಸೇವಾವಧಿಯನ್ನು ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ನಾಗಮ್ಮ ಬಳ್ಳಾರಿ ಮಾತನಾಡಿ, ಹಲವು ವರ್ಷಗಳಿಂದ ನಗರದ ಸ್ವಚ್ಛತೆಗಾಗಿ ದುಡಿಯುತ್ತಿರುವ ಕಾರ್ಮಿಕರನ್ನು ಕಡೆಗಣಿಸಿ ಹೊಸಬರನ್ನು ನೇಮಕ ಮಾಡಿಕೊಳ್ಳುವುದು ನ್ಯಾಯಸಮ್ಮತವಲ್ಲ ಎಂದರು.

ಬೇಡಿಕೆ ಈಡೇರಿಸದಿದ್ದರೆ ಸೆ. 7ರಿಂದ ನಗರಸಭೆ ಎದುರು ಪ್ರತಿಭಟನೆ ನಡೆಸಿ, ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಕಾರ್ಮಿಕರು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಇಂದ್ರವ್ವ ಸಕ್ಕರಿ, ಕನಕವ್ವ ದೊಡ್ಡಮನಿ, ರಾಜೇಶ್ವರಿ, ಯುವರಾಜ ಬಳ್ಳಾರಿ, ಅನಿತಾ ಯಳವತ್ತಿ, ಕಸ್ತೂರಿವ್ವ ಹಾದಿಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka